ಸಂಪುಟ: 11 ಸಂಚಿಕೆ: 178 ಪುಟ: 4+2 ಬೆಲೆ : 3.00 ಬುಧವಾರ, ಆಗಸ್ಟ್ 19, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ






Volume : 11 Issue : 178 Pages : 4+2 Rate : 3.00 Wednesday , August 19, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

### ಡಿಜೆ ಸೌಂಡ್‌ಗೆ ₹1 ಲಕ್ಷದವರೆಗೆ ದಂಡ | ಮಣ್ಣಿನ ಗಣೇಶನಿಗೆ ಜಿಲ್ಲಾಡಳಿತದ ಒತ್ತು

# ಪಿಓಪಿ ಗಣೇಶನಿಗೆ ನೋ ಎಂಟ್ರಿ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಗಣೇಶ ಹಬ್ಬದ ಸಂಭ್ರಮದ ಹೆಸರಿನಲ್ಲಿ ಪರಿಸರಕ್ಕೆ ಹಾನಿ ಮಾಡುವ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಓಪಿ) ಗಣೇಶ ಮೂರ್ತಿಗಳಿಗೆ ಜಿಲ್ಲಾಡಳಿತ ಬ್ರೇಕ್ ಹಾಕಿದೆ. ಜಿಲ್ಲೆಯಲ್ಲಿ ಪಿಓಪಿ ಗಣೇಶ ಮೂರ್ತಿಗಳ ತಯಾರಿಕೆ, ಮಾರಾಟ, ಸಂಗ್ರಹಣೆ ಹಾಗೂ ಬಳಕೆಯನ್ನು ಸಂಪೂರ್ಣ ನಿಷೇಧಿಸಲಾಗಿದ್ದು, ನಿಯಮ ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅಧಿಕಾರಿಗಳಿಗೆ ಸೂಚಿಸಿದ್ದಾರೆ.




ಜಿಲ್ಲಾಧಿಕಾರಿ ಕಚೇರಿಯ ನೂತನ ಸಭಾಂಗಣದಲ್ಲಿ ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಪಿಓಪಿ ಹಾಗೂ ರಾಸಾಯನಿಕ ಅಂಶಗಳಿರುವ ಗಣೇಶ ಮೂರ್ತಿಗಳ ತಯಾರಿಕೆ, ಮಾರಾಟ ಮತ್ತು ವಿಸರ್ಜನೆ ನಿಷೇಧ, ಡಿಜೆ ಸೌಂಡ್ ಸಿಸ್ಟಮ್ ಹಾಗೂ ಹಸಿರು ಪಟಾಕಿಗಳ ಬಳಕೆ ಕುರಿತು ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಗಣೇಶ ಹಬ್ಬದ ಸಂದರ್ಭದಲ್ಲಿ ಮಿತಿ ಮೀರಿದ ಡಿಜೆ ಸೌಂಡ್ ಸಿಸ್ಟಮ್ ಬಳಕೆ ಕಂಡುಬಂದರೆ ಉಪಕರಣ ಜಪ್ತಿ ಮಾಡಿ ₹1 ಲಕ್ಷದವರೆಗೆ ದಂಡ ವಿಧಿಸುವಂತೆ ಜಿಲ್ಲಾಧಿಕಾರಿ ಸೂಚಿಸಿದರು.

ಡಿಜೆ ಸದ್ದಿನಿಂದ ವೃದ್ಧರು, ಚಿಕ್ಕ ಮಕ್ಕಳು ಹಾಗೂ ಗರ್ಭಿಣಿಯರಿಗೆ ತೊಂದರೆಯಾಗುವ ಹಿನ್ನೆಲೆಯಲ್ಲಿ ಡಿಜೆ ಬದಲಿಗೆ ಡೊಳ್ಳು ಕುಣಿತ, ಹೆಜ್ಜೆ ಮೇಳ, ಕರಡಿ ಮಜಲು ಸೇರಿದಂತೆ ಸಾಂಪ್ರದಾಯಿಕ ಜನಪದ ಕಲೆಗಳಿಗೆ ಪ್ರೋತ್ಸಾಹ ನೀಡಬೇಕು ಎಂದರು.

ಜಿಲ್ಲೆಯಲ್ಲಿ ಯಾವುದೇ ಕಾರಣಕ್ಕೂ ಪಿಓಪಿ ಗಣೇಶ ಮೂರ್ತಿಗಳ ಮಾರಾಟಕ್ಕೆ ಅವಕಾಶ ನೀಡಬಾರದು. ಅಧಿಕಾರಿಗಳು ನಗರ ಹಾಗೂ ಪಟ್ಟಣ ಪ್ರದೇಶಗಳಲ್ಲಿ ದಿಢೀರ್ ದಾಳಿ ನಡೆಸಿ ಪಿಓಪಿ ಮೂರ್ತಿಗಳು ಕಂಡುಬಂದರೆ ತಕ್ಷಣ ವಶಪಡಿಸಿಕೊಳ್ಳಬೇಕು. ನಿಯಮ ಉಲ್ಲಂಘಿಸುವ ಮಾರಾಟಗಾರರ ವಿರುದ್ಧ ದಂಡ ವಿಧಿಸಬೇಕು ಎಂದು ಸೂಚಿಸಿದರು.

ಪಿಓಪಿ ಮೂರ್ತಿಗಳು ಬೇರೆ ಜಿಲ್ಲೆಗಳಿಂದ ಧಾರವಾಡ ಜಿಲ್ಲೆಗೆ ಪ್ರವೇಶಿಸದಂತೆ ಜಿಲ್ಲೆಯ ಗಡಿ ಹಾಗೂ ಮಹಾನಗರದ ಗಡಿಭಾಗಗಳಲ್ಲಿ ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಿ ಕಟ್ಟುನಿಟ್ಟಿನ ತಪಾಸಣೆ ನಡೆಸುವಂತೆ ಸೂಚಿಸಲಾಗಿದೆ. ಚೆಕ್‌ಪೋಸ್ಟ್‌ಗಳಲ್ಲಿ ಪೊಲೀಸ್ ಸಿಬ್ಬಂದಿಯೊಂದಿಗೆ ವಿವಿಧ ಇಲಾಖೆಗಳ ಅಧಿಕಾರಿಗಳು ಕಾರ್ಯನಿರ್ವಹಿಸಲಿದ್ದು, ನಿಯಮ ಉಲ್ಲಂಘಿಸಿ ಸಾಗಾಟ ಮಾಡುವ ವಾಹನಗಳು ಹಾಗೂ ಪಿಓಪಿ ಮೂರ್ತಿಗಳನ್ನು ವಶಪಡಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು.

ಪೊಲೀಸ್ ಇಲಾಖೆ, ಪರಿಸರ ಇಲಾಖೆ, ಕಂದಾಯ ಇಲಾಖೆ, ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿ ಅಧಿಕಾರಿಗಳು ನಿರಂತರ ತಪಾಸಣೆ ನಡೆಸಬೇಕು. ಪರಿಸರ ಸ್ನೇಹಿ ಮಣ್ಣಿನ ಗಣೇಶ ಮೂರ್ತಿಗಳ ಬಳಕೆಯ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು. ಗಣೇಶ ಮೂರ್ತಿ ಪ್ರತಿಷ್ಠಾಪನೆ ಹಾಗೂ ವಿಸರ್ಜನೆ ವೇಳೆ ಮೆರವಣಿಗೆಯ ಮಾರ್ಗವನ್ನು ಮುಂಚಿತವಾಗಿ ಪೊಲೀಸ್ ಠಾಣೆಗೆ ತಿಳಿಸಬೇಕು. ಮಾರ್ಗ ಬದಲಾವಣೆ ಇದ್ದಲ್ಲಿ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಬೇಕು. ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ಯಾವುದೇ ರೀತಿಯ ಅಡಚಣೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದರು.

ಇನ್ನು ಗಣೇಶ ಹಬ್ಬದ ಸಂದರ್ಭದಲ್ಲಿ ಹಸಿರು ಪಟಾಕಿಗಳನ್ನು ಮಾತ್ರ ನಿಯಮಾನುಸಾರ ಬಳಸಬೇಕು. ಸಾರ್ವಜನಿಕರಿಗೆ ತೊಂದರೆಯಾಗದಂತೆ ಪಟಾಕಿ ಸಿಡಿಸಬೇಕು. ಪರಿಸರಕ್ಕೆ ಹಾನಿಯಾಗದ ರೀತಿಯಲ್ಲಿ ಹಬ್ಬ ಆಚರಿಸುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದು ಜಿಲ್ಲಾಧಿಕಾರಿ ತಿಳಿಸಿದರು.

> **ಹಬ್ಬ ಆಚರಿಸುವುದು ನಮ್ಮ ಸಂಸ್ಕೃತಿಯ ಹೆಮ್ಮೆ. ಆದರೆ ಅದು ಪರಿಸರ ಸ್ನೇಹಿಯಾಗಿರಬೇಕು. ನೈಸರ್ಗಿಕ ಮಣ್ಣಿನಿಂದ ತಯಾರಿಸಿದ, ಸುಲಭವಾಗಿ ನೀರಿನಲ್ಲಿ ಕರಗುವ ಗಣೇಶ ಮೂರ್ತಿಗಳನ್ನೇ ಪ್ರತಿಷ್ಠಾಪಿಸಿ. ನಮ್ಮ ಹಬ್ಬ, ನಮ್ಮ ಪರಿಸರ, ನಮ್ಮ ಜವಾಬ್ದಾರಿ. ಸಾರ್ವಜನಿಕರ ಸಹಕಾರವಿಲ್ಲದೆ ಜಿಲ್ಲಾಡಳಿತದ ಈ ಕಾರ್ಯ ಸಂಪೂರ್ಣ ಯಶಸ್ವಿಯಾಗಲು ಸಾಧ್ಯವಿಲ್ಲ.**
> **-ಸ್ನೇಹಲ್ ಆರ್**, ಜಿಲ್ಲಾಧಿಕಾರಿ

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಎಸ್. ಘಾಳಿ ಮಾತನಾಡಿ, ಪಾಲಿಕೆ ವ್ಯಾಪ್ತಿಯಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಹಾಗೂ ವಿಸರ್ಜನೆ ಸಂದರ್ಭದಲ್ಲಿ ಚಲನಚಿತ್ರ ಹಾಡುಗಳನ್ನು ಹಾಕದೆ ದೇವರ ನಾಮಾವಳಿಗಳನ್ನು ಬಳಸಬೇಕು. ಲೇಸರ್ ಲೈಟ್‌ಗಳನ್ನು ಬಳಸಬಾರದು ಎಂದು ಸೂಚಿಸಿದರು.

ಪಾಲಿಕೆ ನಿಯೋಜಿಸಿರುವ ಸಾರ್ವಜನಿಕ ನೀರಿನ ತೊಟ್ಟಿಗಳಲ್ಲಿಯೇ ಗಣೇಶ ಮೂರ್ತಿಗಳನ್ನು ಕಡ್ಡಾಯವಾಗಿ ವಿಸರ್ಜಿಸಬೇಕು. ಮಣ್ಣಿನ ಗಣೇಶ ಮೂರ್ತಿ ತಯಾರಕರಿಗೆ ಪಾಲಿಕೆಯಿಂದ ₹25 ಸಾವಿರ ಪ್ರೋತ್ಸಾಹ ಧನ ಹಾಗೂ ಸನ್ಮಾನ ನೀಡಲಾಗುವುದು. ಮನೆಗಳಲ್ಲಿ ಮಣ್ಣಿನ ಗಣೇಶ ಮೂರ್ತಿ ಪ್ರತಿಷ್ಠಾಪಿಸಿದ ಸಾರ್ವಜನಿಕರು ಗಣೇಶನ ಛಾಯಾಚಿತ್ರವನ್ನು ಪಾಲಿಕೆಗೆ ಸಲ್ಲಿಸಿದರೆ ಪ್ರಮಾಣಪತ್ರ ನೀಡಲಾಗುವುದು ಎಂದು ತಿಳಿಸಿದರು.

ಮಣ್ಣಿನ ಗಣೇಶ ಮೂರ್ತಿಗಳನ್ನು ಮನೆಯಲ್ಲಿ ಒಂದು ಬಕೆಟ್ ನೀರಿನಲ್ಲಿ ವಿಸರ್ಜಿಸಿ, ಅದೇ ಮಣ್ಣಿನಿಂದ ಗಿಡ-ಸಸಿಗಳನ್ನು ಬೆಳೆಸುವ ಕುರಿತು ಜನರಲ್ಲಿ ಜಾಗೃತಿ ಮೂಡಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಸಭೆಯಲ್ಲಿ ಪ್ರೊಬೇಷನರಿ ಐಎಎಸ್ ಅಧಿಕಾರಿ ಅನುಪ್ರಿಯಾ ಸಾಕ್ಯಾ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಅಧಿಕಾರಿ ಶೋಭಾ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಸಹಾಯಕ ಪೊಲೀಸ್ ಆಯುಕ್ತ ಪ್ರಶಾಂತ ಸಿದ್ದನಗೌಡರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಗಣೇಶ ಮೂರ್ತಿ ತಯಾರಕರು, ಮಾರಾಟಗಾರರು ಹಾಗೂ ಪಟಾಕಿ ಮಾರಾಟಗಾರರು ಭಾಗವಹಿಸಿದ್ದರು.

---

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ಸಹಕಾರ ದಿನಾಚರಣೆ: ಇಂದು ಪ್ರಬಂಧ, ನಾಳೆ ಚರ್ಚಾ ಸ್ಪರ್ಧೆ

**ವಿಜಯಸಾಕ್ಷಿ ಸುದ್ದಿ, ಗದಗ**

ಅಂತರಾಷ್ಟ್ರೀಯ ಸಹಕಾರ ದಿನಾಚರಣೆ ಅಂಗವಾಗಿ ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಗದಗ ಜಿಲ್ಲಾ ಸಹಕಾರ ಯೂನಿಯನ್ ಹಾಗೂ ವಿವಿಧ ಶಿಕ್ಷಣ ಸಂಸ್ಥೆಗಳ ಸಹಯೋಗದಲ್ಲಿ ವಿದ್ಯಾರ್ಥಿಗಳಿಗಾಗಿ ಜಿಲ್ಲಾ ಮಟ್ಟದ ಪ್ರಬಂಧ ಮತ್ತು ಚರ್ಚಾ ಸ್ಪರ್ಧೆ ಆಯೋಜಿಸಲಾಗಿದೆ.

ಆಗಸ್ಟ್ 19ರಂದು ಮಧ್ಯಾಹ್ನ 1 ಗಂಟೆಗೆ ನಗರದ ಶ್ರೀ ಬಸವೇಶ್ವರ ಮಹಾವಿದ್ಯಾಲಯದಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಅಂತರಾಷ್ಟ್ರೀಯ ಸಹಕಾರ ದಿನದ ಉದ್ದೇಶ, ಮಹತ್ವ ಹಾಗೂ ಪರಿಣಾಮ' ವಿಷಯದ ಕುರಿತು ಪ್ರಬಂಧ ಸ್ಪರ್ಧೆ ನಡೆಯಲಿದೆ. ವಿಜೇತರಿಗೆ ನಗದು ಬಹುಮಾನ, ಪ್ರಶಸ್ತಿ ಪತ್ರ, ಹಾಗೂ ನೆನಪಿನ ಕಾಣಿಕೆ ನೀಡಲಾಗುತ್ತದೆ. ಉತ್ತಮ ಮೂರು ಉತ್ತರ ಪತ್ರಿಕೆಗಳನ್ನು ರಾಜ್ಯಮಟ್ಟದ ಆಯ್ಕೆಗಾಗಿ ಕಳುಹಿಸಲಾಗುತ್ತದೆ.

ಆಗಸ್ಟ್ 20ರಂದು ಬೆಳಿಗ್ಗೆ 11 ಗಂಟೆಗೆ ಜಗದ್ಗುರು ತೋಂಟದಾರ್ಯ ಎಂಜಿನಿಯರಿಂಗ್ ಕಾಲೇಜಿನಲ್ಲಿ ಜನಜೀವನ ಸಮಗ್ರ ಅಭಿವೃದ್ಧಿಗೆ ಸಹಕಾರಿ ವ್ಯವಸ್ಥೆ ನಿರಂತರವಾಗಿ ಶ್ರಮಿಸುತ್ತಿದೆ' ವಿಷಯದ ಕುರಿತು ಚರ್ಚಾ ಸ್ಪರ್ಧೆ ನಡೆಯಲಿದೆ. ಸ್ಪರ್ಧೆಯಲ್ಲಿ ವಿಷಯದ ಪರ ಹಾಗೂ ವಿರೋಧವಾಗಿ ವಿದ್ಯಾರ್ಥಿಗಳು ತಮ್ಮ ಅಭಿಪ್ರಾಯ ಮಂಡಿಸಲಿದ್ದಾರೆ. ವಿಜೇತರನ್ನು ರಾಜ್ಯಮಟ್ಟದ ಚರ್ಚಾ ಸ್ಪರ್ಧೆಗೆ ಕಳುಹಿಸಲಾಗುವುದು. ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಸಿ.ಎಂ. ಪಾಟೀಲ ಅಧ್ಯಕ್ಷತೆ ವಹಿಸಲಿದ್ದು, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಸಿದ್ದಲಿಂಗ ಬಂಡು ಮಸನಾಯಕ ಉದ್ಘಾಟಿಸಲಿದ್ದಾರೆ. ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್. ಎಸ್. ಬುರಡಿ ಸೇರಿದಂತೆ ಸಹಕಾರ ಇಲಾಖೆ ಹಾಗೂ ವಿವಿಧ ಶಿಕ್ಷಣ ಸಂಸ್ಥೆಗಳ ಅಧಿಕಾರಿಗಳು, ಗಣ್ಯರು ಭಾಗವಹಿಸಲಿದ್ದಾರೆ.

---

### ಬೆಲೆ ಏರಿಕೆಗೆ ತಕ್ಕಂತೆ ವೇತನ ಹೆಚ್ಚಳಕ್ಕೆ ಗ್ರಾಪಂ ನೌಕರರ ಆಗ್ರಹ | ಮುಖ್ಯಮಂತ್ರಿಗಳಿಗೆ ಮನವಿ

# ನಮ್ಮ ಬದುಕಿಗೂ ಬೆಲೆ ಕೊಡಿ

**ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಮೀಣ ಜನರ ಮೂಲಭೂತ ಸೇವೆಗಳನ್ನು ನಿರಂತರವಾಗಿ ಒದಗಿಸುತ್ತಿರುವ ಗ್ರಾಮ ಪಂಚಾಯಿತಿ ನೌಕರರ ಬದುಕು ಮಾತ್ರ ಸಂಕಷ್ಟದಲ್ಲಿದೆ. ದಿನದಿಂದ ದಿನಕ್ಕೆ ಬೆಲೆ ಏರಿಕೆಯಾಗುತ್ತಿದ್ದರೂ ಕಳೆದ 78 ವರ್ಷಗಳಿಂದ ವೇತನ ಪರಿಷ್ಕರಣೆಯಾಗಿಲ್ಲ. ಹೀಗಾಗಿ ಬೆಲೆ ಏರಿಕೆಗೆ ತಕ್ಕಂತೆ ವೇತನ ಹೆಚ್ಚಿಸಿ, ನಮ್ಮ ಬದುಕಿಗೂ ಬೆಲೆ ನೀಡಿ ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ, ಗ್ರಾಮ ಪಂಚಾಯಿತಿ ನೌಕರರ ಸಂಘದ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಿ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.




ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ಮನವಿ ಸಲ್ಲಿಸಿದ ನೌಕರರು, ಗ್ರಾಮ ಪಂಚಾಯಿತಿಗಳಲ್ಲಿ ಕರವಸೂಲಿಗಾರರು, ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್‌ಗಳು, ನೀರುಗಂಟಿಗಳು, ಜವಾನರು ಹಾಗೂ ಸ್ವಚ್ಛತಾಗಾರರು ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದರೂ ಸಮರ್ಪಕ ವೇತನ ದೊರೆಯುತ್ತಿಲ್ಲ. ಪ್ರಸ್ತುತ ವೇತನದಲ್ಲಿ ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಕುಟುಂಬ ನಿರ್ವಹಣೆ ಕಷ್ಟವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮೇ 22, 2026ರಂದು ಹೊರಡಿಸಿರುವ ಆದೇಶದಂತೆ ಪರಿಷ್ಕೃತ ವೇತನವನ್ನು ಕೂಡಲೇ ಬಿಡುಗಡೆ ಮಾಡಬೇಕು. ಗ್ರಾಮ ಪಂಚಾಯಿತಿ ನೌಕರರನ್ನು ಸರ್ಕಾರಿ ನೌಕರರೆಂದು ಘೋಷಿಸಿ, ಸೇವಾ ಹಿರಿತನ ಆಧರಿಸಿ ಇನ್‌ಕ್ರಿಮೆಂಟ್ ನೀಡಬೇಕು ಎಂದು ಆಗ್ರಹಿಸಿದರು.

ನೌಕರರು ನಿವೃತ್ತಿ ಹೊಂದಿದಾಗ ಅಥವಾ ಮೃತಪಟ್ಟಾಗ ₹6 ಲಕ್ಷ ಇಡಗಂಟು ನೀಡಬೇಕು. ಗ್ರಾಮ ಪಂಚಾಯಿತಿ ಠರಾವಿನ ಮೂಲಕ ನೇಮಕಗೊಂಡು ಜಿಲ್ಲಾ ಪಂಚಾಯಿತಿಯಿಂದ ಅನುಮೋದನೆ ಪಡೆಯದ ಸಿಬ್ಬಂದಿಗೂ ಈ ಸೌಲಭ್ಯ ಕಲ್ಪಿಸಬೇಕು. ತರಬೇತಿ ಪಡೆದ ಸ್ವಚ್ಛವಾಹಿನಿ ನೌಕರರಿಗೆ ವೇತನ ನೀಡುವುದರ ಜತೆಗೆ ಒಡಂಬಡಿಕೆ ಹಾಗೂ ಪ್ರತಿವರ್ಷ ನವೀಕರಣ ಪದ್ಧತಿ ರದ್ದುಪಡಿಸಿ, 15ನೇ ಹಣಕಾಸಿನಡಿ ವೇತನ ಪಾವತಿಸಬೇಕು ಎಂದು ಒತ್ತಾಯಿಸಿದರು.

> **ಕಳೆದ 78 ವರ್ಷಗಳಿಂದ ವೇತನ ಪರಿಷ್ಕರಣೆಯಾಗಿಲ್ಲ. ಇಂದಿನ ಬೆಲೆ ಏರಿಕೆಯ ಪರಿಸ್ಥಿತಿಯಲ್ಲಿ ಈಗಿರುವ ವೇತನದಲ್ಲಿ ಮಕ್ಕಳ ಶಿಕ್ಷಣ, ಆರೋಗ್ಯ ಸೇರಿದಂತೆ ಕುಟುಂಬ ನಿರ್ವಹಣೆ ಸಾಧ್ಯವಾಗುತ್ತಿಲ್ಲ. ಬೆಲೆ ಏರಿಕೆಗೆ ಅನುಗುಣವಾಗಿ ಪರಿಷ್ಕೃತ ವೇತನವನ್ನು ಕೂಡಲೇ ಬಿಡುಗಡೆ ಮಾಡಿ, ದುಡಿಯುವ ಗ್ರಾಮ ಪಂಚಾಯಿತಿ ನೌಕರರ ಬದುಕಿಗೆ ಸರ್ಕಾರ ನ್ಯಾಯ ಒದಗಿಸಬೇಕು.**
> **- ಎಂ.ಬಿ. ನಾಡಗೌಡ,** ಸಂಘದ ಮುಖಂಡ

ಪ್ರತಿ ಗ್ರಾಮ ಪಂಚಾಯಿತಿಗೆ ಒಬ್ಬ ಚಾಲಕನನ್ನು ಪರಿಗಣಿಸಿ ₹15 ಸಾವಿರ ವೇತನ ನಿಗದಿಪಡಿಸಬೇಕು. ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ಮುಂದುವರಿಸಬೇಕು. ಕಂಪ್ಯೂಟರ್ ಜ್ಞಾನ ಮತ್ತು ವಿದ್ಯಾರ್ಹತೆ ಹೊಂದಿರುವ ಪಂಚಾಯಿತಿ ನೌಕರರಿಗೂ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ಅವಕಾಶ ನೀಡಬೇಕು ಎಂದು ಮನವಿ ಮಾಡಿದರು. ಪಂಚಾಯಿತಿಯ ಆದಾಯಕ್ಕೆ ಅನುಗುಣವಾಗಿ ಕರವಸೂಲಿಗಾರರ ಹುದ್ದೆ ನಿಗದಿಪಡಿಸಿ, 2017ರೊಳಗೆ ನೇಮಕಗೊಂಡ ಹೆಚ್ಚುವರಿ ಕರವಸೂಲಿಗಾರರಿಗೆ ಅನುಮೋದನೆ ನೀಡಬೇಕು. ಖಾಲಿ ಇರುವ ಕರವಸೂಲಿಗಾರ, ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್, ನೀರುಗಂಟಿ, ಜವಾನ ಹಾಗೂ ಸ್ವಚ್ಛತಾಗಾರರ ಹುದ್ದೆಗಳನ್ನು ಭರ್ತಿ ಮಾಡಬೇಕು ಎಂದು ಆಗ್ರಹಿಸಿದರು.

ಗ್ರೇಡ್-1 ಕಾರ್ಯದರ್ಶಿಗಳಿಂದ ಪಿಡಿಒ ಹುದ್ದೆಗೆ ಜಿಲ್ಲಾ ಮಟ್ಟದಲ್ಲಿ ಮುಂಬಡ್ತಿಗೆ ಅವಕಾಶ ನೀಡಬೇಕು. ಪ್ರತಿ ಗ್ರಾಮ ಪಂಚಾಯಿತಿಗೆ ಲೆಕ್ಕ ಸಹಾಯಕ ಹುದ್ದೆ ಸೃಷ್ಟಿಸಬೇಕು. ಕೆಸಿಎಸ್‌ಆರ್ ನಿಯಮ 325ರನ್ವಯ ಹಿಂದಿನ ಸೇವೆಯನ್ನು ಪರಿಗಣಿಸಿ ಹಳೆ ಪಿಂಚಣಿ ಜಾರಿಗೊಳಿಸಬೇಕು. ಜನಸಂಖ್ಯೆ ಆಧರಿಸಿ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಿ, ಪಿಡಿಒ ಹುದ್ದೆಗಳಲ್ಲಿ ಶೇ.60ರಷ್ಟು ಸ್ಥಾನಗಳನ್ನು ಗ್ರೇಡ್-1 ಕಾರ್ಯದರ್ಶಿಗಳಿಗೆ ನೀಡಬೇಕು ಎಂದು ಒತ್ತಾಯಿಸಿದರು.

ಬೇಡಿಕೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಶೀಘ್ರ ಈಡೇರಿಸಬೇಕು. ಇಲ್ಲವಾದಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಸಂಘದ ಪದಾಧಿಕಾರಿಗಳು ಎಚ್ಚರಿಸಿದರು. ಈ ಸಂದರ್ಭದಲ್ಲಿ ಜಿ.ಎಂ. ಜೈನಖಾನ್, ಪ್ರಧಾನ ಕಾರ್ಯದರ್ಶಿ, ರುದ್ರಪ್ಪ ಕಂದಗಲ್ಲ ಹಾಗೂ ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘ ಮತ್ತು ಸಿಐಟಿಯು ಪದಾಧಿಕಾರಿಗಳು ಉಪಸ್ಥಿತರಿದ್ದರು.

---

### ಶಾಶ್ವತ ನೀರು, ಉದ್ಯೋಗಕ್ಕೆ ಯುವಕರ ಆಗ್ರಹ

# ಗದಗದ ಭವಿಷ್ಯಕ್ಕಾಗಿ ರಕ್ತದ ಸಹಿ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಸಮಗ್ರ ಅಭಿವೃದ್ಧಿ, ಶಾಶ್ವತ ಕುಡಿಯುವ ನೀರಿನ ಪರಿಹಾರ, ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸುವುದು ಹಾಗೂ ರೈತರ ಹಿತದೃಷ್ಟಿಯಿಂದ ಗದಗ ಜಿಲ್ಲೆಯನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಬೇಕೆಂಬ ಬೇಡಿಕೆಗಳನ್ನು ಮುಂದಿಟ್ಟುಕೊಂಡು 20ನೇ ವಾರ್ಡ್‌ನಲ್ಲಿ ರಕ್ತ ಸಹಿ ಅಭಿಯಾನ ನಡೆಯಿತು.

ಬಿಜೆಪಿ ಮುಖಂಡ ಮೋಹನ್ ವರವಿ ಅವರ ನೇತೃತ್ವದಲ್ಲಿ ನಡೆದ ಅಭಿಯಾನದಲ್ಲಿ ವಾರ್ಡ್‌ನ ನೂರಾರು ಯುವಕರು ಸ್ವಯಂಪ್ರೇರಿತರಾಗಿ ಪಾಲ್ಗೊಂಡು ರಕ್ತದಿಂದ ಸಹಿ ಮಾಡುವ ಮೂಲಕ ತಮ್ಮ ಬೇಡಿಕೆಗಳಿಗೆ ಬೆಂಬಲ ವ್ಯಕ್ತಪಡಿಸಿದರು.

ಗದಗದ ಅಭಿವೃದ್ಧಿ ಹಾಗೂ ಜನರ ಮೂಲಭೂತ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕೆಂಬ ಒತ್ತಾಯದೊಂದಿಗೆ ನಡೆಯುತ್ತಿರುವ ರಕ್ತ ಸಹಿ ಅಭಿಯಾನಕ್ಕೆ ದಿನದಿಂದ ದಿನಕ್ಕೆ ಯುವಕರ ಬೆಂಬಲ ಹೆಚ್ಚುತ್ತಿದೆ. ಇದು ಕೇವಲ ರಕ್ತದ ಸಹಿಯಲ್ಲ, ಗದಗದ ಅಭಿವೃದ್ಧಿಗಾಗಿ ಯುವಜನರ ಆಶಯ, ಸಂಕಲ್ಪ ಹಾಗೂ ಒಗ್ಗಟ್ಟಿನ ಪ್ರತೀಕವಾಗಿದೆ ಎಂದು ಅಭಿಯಾನಕಾರರು ತಿಳಿಸಿದರು. ನಗರದ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ, ಸ್ಥಳೀಯ ಯುವಕರಿಗೆ ಉದ್ಯೋಗಾವಕಾಶ ಹಾಗೂ ರೈತರ ಸಂಕಷ್ಟಕ್ಕೆ ಸ್ಪಂದಿಸುವ ನಿಟ್ಟಿನಲ್ಲಿ ಸರ್ಕಾರ ಕೂಡಲೇ ಅಗತ್ಯ ಕ್ರಮ ಕೈಗೊಳ್ಳಬೇಕು. ಜನರ ದೀರ್ಘಕಾಲದ ಬೇಡಿಕೆಗಳಿಗೆ ಕೇವಲ ಭರವಸೆ ನೀಡದೆ, ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಆಗ್ರಹಿಸಿದರು.

> **ನಮಗೆ ಯಾರ ವಿರುದ್ಧವೂ ಹೋರಾಟವಿಲ್ಲ, ಗದಗದ ಅಭಿವೃದ್ಧಿಗಾಗಿ ನಮ್ಮ ಹೋರಾಟ. ನಮಗೆ ಬೇಕಿರುವುದು ಭರವಸೆ ಮಾತ್ರವಲ್ಲನ್ಯಾಯ ಮತ್ತು ಶಾಶ್ವತ ಪರಿಹಾರ.**
> **- ಮೋಹನ್ ವರವಿ,** ಬಿಜೆಪಿ ಮುಖಂಡ

ಈ ಜನಪರ ಹೋರಾಟದ ಧ್ವನಿ ಸರ್ಕಾರ ಹಾಗೂ ಆಡಳಿತಗಾರರ ಗಮನಕ್ಕೆ ತಲುಪಿ, ಗದಗದ ಜನರ ನ್ಯಾಯಯುತ ಬೇಡಿಕೆಗಳಿಗೆ ಶೀಘ್ರ ಸ್ಪಂದನೆ ದೊರೆಯಲಿ ಎಂಬ ಆಶಯವನ್ನು ಅಭಿಯಾನಕಾರರು ವ್ಯಕ್ತಪಡಿಸಿದರು.

ಅಭಿಯಾನದಲ್ಲಿ ಪ್ರವೀಣ್ ಕರಬಿಷ್ಟಿ, ಮಂಜು ವರವಿ, ಮಲ್ಲು ಜಂತ್ಲಿ, ಮಂಜುನಾಥ ಜುಟ್ಲರ, ಪರಶುರಾಮ ಗೊಂದಿ, ಅಮಸಿದ್ದ ಗೌಡರ, ಅನಿಲ ಬಳ್ಳಾರಿ, ಮನೋಜ ಕಿರಟಗೇರಿ, ಲಕ್ಷ್ಮಣ ಮುರುಗೋಡ, ಪ್ರಶಾಂತ ವರವಿ, ಬಸವರಾಜ ಕಮತರ, ನಿಖಿಲ ಅಣ್ಣಿಗೇರಿ, ಪ್ರಕಾಶ ಬರಾಡ, ಸಮೀರ್ ಪಿತ್ತೂರು, ಕಿರಣ ಹುನಗುಂಡಿ, ಕುನಲ ಪವಾರ, ಸಚಿನ ಕಾಂಬಳೆ, ಲೋಕೇಶ ಹೂವಿನಹಡಗಲಿ, ಪ್ರಜ್ವಲ ಕರಿ, ಸಂತೋಷ ಕುರಿ, ನೂತನ ಮುರುಗೋಡ, ಶಿವು ಮುಳುಗುಂದ, ಸೋಹಿಲ ಮುಳುಗುಂದ, ಆರ್ಯನ ಬಾದಾಮಿ, ಉಮೇಶ್ ರೆಡ್ಡಿ ಹಳ್ಯಾಳ, ತನ್ಮಯ ದೊಡ್ಡಮನಿ, ಮದನ ಸಿಂಗ್ ರಜಪೂತ ಸೇರಿದಂತೆ ನೂರಾರು ಯುವಕರು ಪಾಲ್ಗೊಂಡಿದ್ದರು.

---

## ನಾಳೆ ದೇವರಾಜ ಅರಸು ಜನ್ಮ ದಿನಾಚರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಶೋಷಿತರ ಸಮಗ್ರ ಅಭಿವೃದ್ಧಿಯ ಸಾಮಾಜಿಕ ಕ್ರಾಂತಿಯ ಹರಿಕಾರ, ನೊಂದವರ ನಂದಾದೀಪ ಹಾಗೂ ಕರ್ನಾಟಕದ ಮಾಜಿ ಮುಖ್ಯಮಂತ್ರಿ ದಿ. ಡಿ. ದೇವರಾಜ ಅರಸು ಅವರ 111ನೇ ಜನ್ಮ ದಿನಾಚರಣೆಯನ್ನು ಆಗಸ್ಟ್ 20ರಂದು ನಗರದಲ್ಲಿ ಆಚರಿಸಲಾಗುತ್ತಿದೆ. ಅಂದು ಬೆಳಿಗ್ಗೆ 8 ಗಂಟೆಗೆ ನಗರದ ಕಿತ್ತೂರು ರಾಣಿ ಚನ್ನಮ್ಮ ವೃತ್ತದಿಂದ ಮೆರವಣಿಗೆ ಆರಂಭವಾಗಲಿದ್ದು, ಮುಳಗುಂದ ರಸ್ತೆ, ದೋಬಿಘಾಟ್ ಮಾರ್ಗವಾಗಿ ಕನಕ ಭವನ ತಲುಪಲಿದೆ. ಬೆಳಿಗ್ಗೆ 10 ಗಂಟೆಗೆ ಮುಳಗುಂದ ರಸ್ತೆಯ ಕನಕ ಭವನದಲ್ಲಿ ಮುಖ್ಯ ಸಮಾರಂಭ ನಡೆಯಲಿದೆ. ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್, ವಿಧಾನಸಭೆ ಸಭಾಧ್ಯಕ್ಷ ಜಿ.ಎಸ್. ಪಾಟೀಲ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಅವರು ಘನ ಉಪಸ್ಥಿತಿ ವಹಿಸುವರು. ಉನ್ನತ ಶಿಕ್ಷಣ ಸಚಿವ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಗದಗ ಶಾಸಕ ಡಾ. ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಬಸವರಾಜ ಹೊರಟ್ಟಿ, ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಹಾಗೂ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ. ಅಸೂಟಿ ಹಾಗೂ ಅಶೋಕ ಮಂದಾಲಿ ಭಾಗವಹಿಸುವರು. ವಿಶೇಷ ಆಹ್ವಾನಿತರಾಗಿ ಸಹಕಾರ ಸಂಘಗಳ ನಿಬಂಧಕರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ ಹಾಗೂ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಾನಕಿ ಕೆ.ಎಂ. ಆಗಮಿಸುವರು.

---

## ಭಾರತ್ ಜೋಡೋ ಯುವ ಸಂಘಗಳ ಸದಸ್ಯತ್ವ ನೋಂದಣಿ ಆರಂಭ

**ವಿಜಯಸಾಕ್ಷಿ ಸುದ್ದಿ, ಗದಗ**

ಯುವಕರಲ್ಲಿ ಕ್ರೀಡೆ, ಸಂಸ್ಕೃತಿ, ವೈಜ್ಞಾನಿಕ ಮನೋಭಾವ, ಸಾಮಾಜಿಕ ಸಾಮರಸ್ಯ ಹಾಗೂ ನಾಯಕತ್ವ ಗುಣ ಬೆಳೆಸುವ ಉದ್ದೇಶದಿಂದ ರಾಜ್ಯ ಸರ್ಕಾರ ಆರಂಭಿಸಿರುವ ಭಾರತ್ ಜೋಡೋ ಯುವ ಸಂಘ'ಗಳ ಸದಸ್ಯತ್ವ ನೋಂದಣಿ ಪ್ರಕ್ರಿಯೆ ಆರಂಭವಾಗಿದೆ. ರಾಜ್ಯಾದ್ಯಂತ 10 ಸಾವಿರ ಸಂಘಗಳನ್ನು ಸ್ಥಾಪಿಸುವ ಗುರಿ ಹೊಂದಿದ್ದು, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 6 ಸಾವಿರ ಹಾಗೂ ನಗರ ವಾರ್ಡ್‌ಗಳಲ್ಲಿ 4 ಸಾವಿರ ಸಂಘಗಳನ್ನು ರಚಿಸಲಾಗುತ್ತದೆ. 16ರಿಂದ 35 ವರ್ಷದೊಳಗಿನ ಯುವಕ-ಯುವತಿಯರು ಸದಸ್ಯರಾಗಲು ಅರ್ಹರಾಗಿದ್ದು, ಪ್ರತಿ ಸಂಘ ದಲ್ಲಿ ಕನಿಷ್ಠ 100 ಸದಸ್ಯರು ಇರಬೇಕು. ಪೋರ್ಟಲ್ ಅಥವಾ ಮೊಬೈಲ್ ಆ್ಯಪ್ ಮೂಲಕ ನೋಂದಣಿ ಮಾಡಿಕೊಳ್ಳಬಹುದು. ಆನ್‌ಲೈನ್ ಸೌಲಭ್ಯವಿಲ್ಲದವರು ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಹಾಗೂ ನಾಗರಿಕ ಸೇವಾ ಕೇಂದ್ರಗಳ ನೆರವು ಪಡೆಯಬಹುದು. ಕ್ರೀಡೆ, ಯೋಗ, ಸಾಂಸ್ಕೃತಿಕ ಕಾರ್ಯಕ್ರಮ, ಸ್ವಚ್ಛತಾ ಅಭಿಯಾನ, ಪರಿಸರ ಸಂರಕ್ಷಣೆ, ಆರೋಗ್ಯ ಜಾಗೃತಿ ಹಾಗೂ ಸಮಾಜ ಸೇವೆ ಸೇರಿದಂತೆ ವಿವಿಧ ಚಟುವಟಿಕೆಗಳಿಗೆ ಸಂಘಗಳು ವೇದಿಕೆಯಾಗಲಿವೆ. ಪ್ರತಿ ಸಂಘಕ್ಕೆ ವಾರ್ಷಿಕ ₹10 ಲಕ್ಷದವರೆಗೆ ಅನು ದಾನ ನೀಡುವ ಯೋಜನೆ ರೂಪಿಸಲಾಗಿದ್ದು, ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಸದಸ್ಯತ್ವ ಪಡೆದು ಯೋಜ ನೆಯ ಸದುಪಯೋಗ ಪಡೆಯುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮನವಿ ಮಾಡಿದೆ.

---

## 12 ವರ್ಷಕ್ಕೊಮ್ಮೆ ನಡೆಯುವ ದ್ಯಾಮವ್ವ-ದುರ್ಗಮ್ಮ ಜಾತ್ರೆ; ಇಂದು ಸಾಂಸ್ಕೃತಿಕ ಕಾರ್ಯಕ್ರಮ

**ವಿಜಯಸಾಕ್ಷಿ ಸುದ್ದಿ, ಗದಗ**



ನಗರದ ಗ್ರಾಮದೇವತೆಗಳಾದ ಶ್ರೀ ದ್ಯಾಮವ್ವ ಹಾಗೂ ಶ್ರೀ ದುರ್ಗಮ್ಮ ದೇವಿಯರ 12 ವರ್ಷಕ್ಕೊಮ್ಮೆ ನಡೆಯುವ ಹರಿಜಾತ್ರಾ ಮಹೋತ್ಸವದ ಅಂಗವಾಗಿ ಆಗಸ್ಟ್ 19ರಂದು ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಸಂಜೆ 7 ಗಂಟೆಗೆ ನಡೆಯುವ ಸಭಾ ಕಾರ್ಯಕ್ರಮದಲ್ಲಿ ಅಂತೂರ-ಬೆಂತೂರಿನ ಬೂದೀಶ್ವರ ಸಂಸ್ಥಾನಮಠದ ಪೂಜ್ಯ ಶ್ರೀ ಡಾ. ರಾಚೋಟೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸುವರು. ಟ್ರಸ್ಟ್ ಕಮಿಟಿ ಅಧ್ಯಕ್ಷ ಕೊಟ್ರಪ್ಪ ಕಮತರ ಅಧ್ಯಕ್ಷತೆ ವಹಿಸುವರು. ಜಾತ್ರಾ ಕಮಿಟಿ ಕಾರ್ಯಾಧ್ಯಕ್ಷ ಫಕ್ಕೀರಪ್ಪ ಹೆಬಸೂರ ಉಪಸ್ಥಿತರಿರುವರು. ಮುಖ್ಯ ಅತಿಥಿಗಳಾಗಿ ಬಣಜಿಗ ಸಮಾಜದ ಅಧ್ಯಕ್ಷ ಈಶಣ್ಣ ಮುನವಳ್ಳಿ, ಮರಾಠಾ ಸಮಾಜದ ಜಿಲ್ಲಾಧ್ಯಕ್ಷ ಅರುಣಕುಮಾರ ಚವ್ಹಾಣ, ವಿಶ್ವಕರ್ಮ ಸಮಾಜದ ಆರ್.ಡಿ. ಕಡ್ಲಿಕೊಪ್ಪ, ವಾಲ್ಮೀಕಿ ಸಮಾಜದ ಜಿಲ್ಲಾಧ್ಯಕ್ಷ ಬಸವರಾಜ ಬೆಳದಡಿ ಹಾಗೂ ಉದ್ಯಮಿ ಪ್ರಕಾಶ ಕರಿ ಭಾಗವಹಿಸುವರು. ಅತಿಥಿಗಳಾಗಿ ನಗರಸಭೆ ಸದಸ್ಯರಾದ ಲಕ್ಷ್ಮವ್ವ ಭಜಂತ್ರಿ, ರಾಘವೇಂದ್ರ ಯಳವತ್ತಿ, ಪೂರ್ಣಿಮಾ ಭರದ್ವಾಡ, ಚಂದ್ರಶೇಖರಗೌಡ ಕರಿಸೋಮನಗೌಡ್ರ, ಹಾಗೂ ಇಮ್ತಿಯಾಜ್ ಶಿರಹಟ್ಟಿ ಉಪಸ್ಥಿತರಿರುವರು.

ನಂತರ ರಾತ್ರಿ 8.30ಕ್ಕೆ ಕಾಮಿಡಿ ಕಿಲಾಡಿ ಖ್ಯಾತಿಯ ಸಂಜು ಬಸಯ್ಯ ಹಾಗೂ ಗದುಗಿನ ನಟರಂಗ ಕಲಾ ಸಂಸ್ಥೆ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ದ್ಯಾಮವ್ವ ಹಾಗೂ ದುರ್ಗಮ್ಮ ದೇವಿಯರ ಹರಿಜಾತ್ರೋತ್ಸವ ಕಮಿಟಿ ಪ್ರಕಟಣೆಯಲ್ಲಿ ತಿಳಿಸಿದೆ.

# ಕ್ಷಣಗಳನ್ನು ಶಾಶ್ವತಗೊಳಿಸಿದ ಗದಗದ ಕ್ಯಾಮೆರಾ ಕಣ್ಣುಗಳು



## ಇತಿಹಾಸದ ಹೆಜ್ಜೆಗುರುತುಗಳಿಂದ ಇಂದಿನ ಡಿಜಿಟಲ್ ಯುಗದವರೆಗೆ ಪತ್ರಿಕೋದ್ಯಮದ ಘನತೆ ಎತ್ತಿಹಿಡಿದ ಛಾಯಾಚಿತ್ರ ಕಲಾವಿದರು

ಕಣ್ಣಿಗೆ ಕಾಣುವ ಒಂದು ಕ್ಷಣವನ್ನು ಕ್ಯಾಮೆರಾದ ಕಣ್ಣಿನ ಮೂಲಕ ಸೆರೆಹಿಡಿದು, ಅದನ್ನು ಮುಂದಿನ ಪೀಳಿಗೆಗಳಿಗೂ ಉಳಿಸಿಕೊಡುವ ಛಾಯಾಗ್ರಾಹಕರ ಸೃಜನಶೀಲತೆ, ಪರಿಶ್ರಮ ಮತ್ತು ಕಲೆಯನ್ನು ಗೌರವಿಸುವ ದಿನವೇ ವಿಶ್ವ ಛಾಯಾಗ್ರಾಹಕರ ದಿನ. ಪ್ರತಿ ವರ್ಷ ಆಗಸ್ಟ್ 19ರಂದು ವಿಶ್ವದಾದ್ಯಂತ ಈ ದಿನವನ್ನು ಆಚರಿಸಲಾಗುತ್ತದೆ.

ಛಾಯಾಗ್ರಹಣವೆಂದರೆ ಕೇವಲ ಒಂದು ಚಿತ್ರ ತೆಗೆಯುವ ತಂತ್ರವಲ್ಲ; ಅದು ಕಾಲವನ್ನು ದಾಖಲಿಸುವ ಅಪೂರ್ವ ಕಲೆ. ಒಂದು ಛಾಯಾಚಿತ್ರದಲ್ಲಿ ವ್ಯಕ್ತಿಯ ಭಾವನೆ, ಸಮಾಜದ ಸ್ಥಿತಿ, ಪ್ರಕೃತಿಯ ಸೌಂದರ್ಯ, ಇತಿಹಾಸದ ಹೆಜ್ಜೆಗುರುತು ಹಾಗೂ ಬದುಕಿನ ಅನೇಕ ನೆನಪುಗಳು ಅಡಗಿರುತ್ತವೆ. ಮಾತುಗಳಿಂದ ಹೇಳಲಾಗದ ಭಾವವನ್ನೂ ಒಂದು ಉತ್ತಮ ಛಾಯಾಚಿತ್ರ ಹೇಳಬಲ್ಲದು. ಹೀಗಾಗಿಯೇ ಕೆಲವೊಮ್ಮೆ ಒಂದು ಚಿತ್ರವೇ ಸಾವಿರಾರು ಪದಗಳಿಗಿಂತ ಹೆಚ್ಚು ಪರಿಣಾಮಕಾರಿಯಾಗಿ ಮಾತನಾಡುತ್ತದೆ.

ಸಾಮಾನ್ಯ ದೃಶ್ಯದಲ್ಲಿಯೂ ಅಸಾಮಾನ್ಯ ಸೌಂದರ್ಯವನ್ನು ಕಂಡುಕೊಳ್ಳುವ ದೃಷ್ಟಿ ಛಾಯಾಗ್ರಾಹಕನದ್ದು. ಬೆಳಕುನೆರಳು, ಬಣ್ಣಭಾವ, ಕ್ಷಣಕಾಲ ಇವೆಲ್ಲವನ್ನೂ ಸಮನ್ವಯಗೊಳಿಸಿ ಚಿತ್ರಕ್ಕೆ ಜೀವ ತುಂಬುವ ಕಲೆ ಅವನದು. ಸರಿಯಾದ ಕ್ಷಣವನ್ನು ಗುರುತಿಸುವ ದೃಷ್ಟಿ, ಬೆಳಕಿನ ಅರಿವು, ಸಂಯೋಜನೆಯ ಪ್ರಜ್ಞೆ ಮತ್ತು ವಿಷಯದ ಮೇಲಿನ ಸೂಕ್ಷ್ಮ ಸಂವೇದನೆ ಒಬ್ಬ ಉತ್ತಮ ಛಾಯಾಗ್ರಾಹಕನನ್ನು ರೂಪಿಸುತ್ತವೆ.

ಇಂದಿನ ಡಿಜಿಟಲ್ ಯುಗದಲ್ಲಿ ಮೊಬೈಲ್ ಫೋನ್‌ಗಳಲ್ಲಿಯೇ ಅತ್ಯಾಧುನಿಕ ಕ್ಯಾಮೆರಾಗಳು ಲಭ್ಯವಿದ್ದು, ಪ್ರತಿಯೊಬ್ಬರೂ ಛಾಯಾಚಿತ್ರ ತೆಗೆಯಬಹುದಾದ ಪರಿಸ್ಥಿತಿ ನಿರ್ಮಾಣವಾಗಿದೆ. ಆದರೆ ಚಿತ್ರ ತೆಗೆಯುವುದು ಬೇರೆ, ಚಿತ್ರವನ್ನು ಸೃಷ್ಟಿಸುವುದು ಬೇರೆ. ಕ್ಯಾಮೆರಾ ಕೈಯಲ್ಲಿರುವುದರಿಂದ ಮಾತ್ರ ಯಾರೂ ಛಾಯಾಗ್ರಾಹಕರಾಗುವುದಿಲ್ಲ. ಒಂದು ಕ್ಷಣದ ಮಹತ್ವವನ್ನು ಗುರುತಿಸಿ, ಅದರ ಹಿಂದೆ ಇರುವ ಕಥೆಯನ್ನು ಅರಿತು, ಅದನ್ನು ಪರಿಣಾಮಕಾರಿಯಾಗಿ ಕಟ್ಟಿಕೊಡುವ ದೃಷ್ಟಿಯೇ ಛಾಯಾಗ್ರಾಹಕನ ನಿಜವಾದ ಶಕ್ತಿ.

ರೂಪದರ್ಶಿ ಛಾಯಾಗ್ರಹಣ, ನಿಸರ್ಗ ಛಾಯಾಗ್ರಹಣ, ವಾಣಿಜ್ಯ ಛಾಯಾಗ್ರಹಣ, ಪತ್ರಿಕೋದ್ಯಮ ಛಾಯಾಗ್ರಹಣ, ಫಿಲ್ಮ್ ಫೋಟೋಗ್ರಫಿ ಸೇರಿದಂತೆ ಹಲವು ಪ್ರಕಾರಗಳ ಛಾಯಾಗ್ರಾಹಕರು ನಮ್ಮ ನಡುವೆ ಇದ್ದಾರೆ. ಹವ್ಯಾಸಿ ಛಾಯಾಗ್ರಾಹಕರೂ ತಮ್ಮದೇ ಆದ ವಿಶಿಷ್ಟ ದೃಷ್ಟಿಕೋನದಿಂದ ಈ ಕಲೆಯನ್ನು ಶ್ರೀಮಂತಗೊಳಿಸುತ್ತಿದ್ದಾರೆ.

ಸುದ್ದಿ ಛಾಯಾಗ್ರಾಹಕರು ಸಮಾಜದ ಆಗುಹೋಗುಗಳನ್ನು ದಾಖಲಿಸುತ್ತಾರೆ. ಪ್ರಕೃತಿ ಛಾಯಾಗ್ರಾಹಕರು ಪರಿಸರದ ಸೌಂದರ್ಯವನ್ನು ಜಗತ್ತಿಗೆ ಪರಿಚಯಿಸುತ್ತಾರೆ. ವನ್ಯಜೀವಿ ಛಾಯಾಗ್ರಾಹಕರು ಅಪರೂಪದ ಜೀವಿಗಳ ಬದುಕನ್ನು ನಮ್ಮ ಕಣ್ಣಮುಂದೆ ತರುತ್ತಾರೆ. ಕಲಾತ್ಮಕ ಛಾಯಾಗ್ರಾಹಕರು ಕಲ್ಪನೆ ಮತ್ತು ಸೌಂದರ್ಯದ ಹೊಸ ಲೋಕವನ್ನು ನಿರ್ಮಿಸುತ್ತಾರೆ. ಹೀಗೆ ಛಾಯಾಗ್ರಹಣದ ಪ್ರತಿಯೊಂದು ಕ್ಷೇತ್ರವೂ ಸಮಾಜಕ್ಕೆ ತನ್ನದೇ ಆದ ಕೊಡುಗೆಯನ್ನು ನೀಡುತ್ತಿದೆ.

ಒಂದು ಹಳೆಯ ಛಾಯಾಚಿತ್ರವನ್ನು ನೋಡಿದಾಗ ನಾವು ಕೇವಲ ಮುಖಗಳನ್ನು ನೋಡುವುದಿಲ್ಲ; ಅದರೊಂದಿಗೆ ಒಂದು ಕಾಲಘಟ್ಟವನ್ನೇ ಮರುಕಾಣುತ್ತೇವೆ. ಕುಟುಂಬದ ನೆನಪುಗಳಿಂದ ಹಿಡಿದು ಐತಿಹಾಸಿಕ ಘಟನೆಗಳವರೆಗೆ ಛಾಯಾಚಿತ್ರಗಳು ನಮ್ಮ ಸ್ಮೃತಿಯ ಅಮೂಲ್ಯ ದಾಖಲೆಗಳಾಗಿವೆ. ಕ್ಷಣ ಕಳೆದುಹೋಗಬಹುದು, ಕಾಲ ಮುಂದೆ ಸಾಗಬಹುದು; ಆದರೆ ಅದನ್ನು ಪ್ರೀತಿಯಿಂದ ಸೆರೆಹಿಡಿದ ಒಂದು ಛಾಯಾಚಿತ್ರ ಮಾತ್ರ ನೆನಪಾಗಿ ನಮ್ಮೊಂದಿಗೆ ಉಳಿಯುತ್ತದೆ.







### ಗದಗದ ಛಾಯಾಗ್ರಹಣಕ್ಕಿದೆ ಸುದೀರ್ಘ ಇತಿಹಾಸ

ಗದಗ ಜಿಲ್ಲೆಯ ಪತ್ರಿಕಾ ಛಾಯಾಗ್ರಾಹಕರಿಗೆ ವಿಶೇಷ ಸ್ಥಾನಮಾನವಿದೆ. ಅವರ ಛಾಯಾಗ್ರಹಣದ ಪಯಣಕ್ಕೆ ಸುದೀರ್ಘ ಇತಿಹಾಸವೂ ಇದೆ. ಗದಗದಲ್ಲಿ ಛಾಯಾಗ್ರಹಣದ ಕ್ಷೇತ್ರಕ್ಕೆ ಭದ್ರ ಬುನಾದಿ ಹಾಕಿದವರಲ್ಲಿ ನಾಗಪ್ಪ ಮಹೇಂದ್ರಕರ ಅವರ ಹೆಸರು ಪ್ರಮುಖವಾಗಿ ನೆನಪಾಗುತ್ತದೆ.

ನಾಗಪ್ಪ ಮಹೇಂದ್ರಕರ ಅವರು 1922ರಲ್ಲಿ ಸ್ಟುಡಿಯೋ ಆರಂಭಿಸಿದ್ದರು. ಮಹಾತ್ಮ ಗಾಂಧೀಜಿ ಜಕ್ಕಲಿ ಗ್ರಾಮಕ್ಕೆ ಆಗಮಿಸಿದ ಸಂದರ್ಭವನ್ನು ಸೆರೆಹಿಡಿದ ಹೆಗ್ಗಳಿಕೆಯೂ ನಾಗಪ್ಪ ಮಹೇಂದ್ರಕರ ಅವರದ್ದಾಗಿದೆ. ಛಾಯಾಗ್ರಹಣದ ಮೇಲಿನ ಅವರ ಆಸಕ್ತಿ ಹಾಗೂ ಬದ್ಧತೆ ಮುಂದಿನ ಪೀಳಿಗೆಗೂ ಸಾಗಿತು. ಅವರ ಐದು ಮಕ್ಕಳುಭೀಮರಾವ, ದತ್ತಾತ್ರೇಯ, ಶ್ರೀಧರ, ವಸಂತ ಮತ್ತು ಮಧುಕರ್ಸಾಹ ಛಾಯಾಗ್ರಹಣ ಕ್ಷೇತ್ರದಲ್ಲಿಯೇ ತಮ್ಮ ಬದುಕನ್ನು ಕಟ್ಟಿಕೊಂಡರು.

ಇವರಲ್ಲಿ ವಸಂತ ಮಹೇಂದ್ರಕರ ಅವರು ತಮ್ಮ ವೃತ್ತಿ ಜೀವನದ ಅನೇಕ ಅಪರೂಪದ ಕ್ಷಣಗಳನ್ನು ಕ್ಯಾಮೆರಾದಲ್ಲಿ ಸೆರೆಹಿಡಿದಿದ್ದಾರೆ. ಗದಗ ಕಾಟನ್ ಸೇಲ್ಸ್ ಸೊಸೈಟಿಗೆ ಪ್ರಧಾನಮಂತ್ರಿ ಶ್ರೀಮತಿ ಇಂದಿರಾ ಗಾಂಧಿ ಆಗಮಿಸಿದ್ದ ಸಂದರ್ಭದಲ್ಲಿ ಅವರ ಚಿತ್ರವನ್ನು ತಾನೇ ತೆಗೆದಿರುವುದಾಗಿ ವಸಂತ ಮಹೇಂದ್ರಕರ ಅವರು ಹೆಮ್ಮೆ ಮತ್ತು ಅಭಿಮಾನದಿಂದ ಹೇಳುತ್ತಾರೆ. ಆ ನೆನಪುಗಳನ್ನು ಮೆಲುಕು ಹಾಕುವಾಗ ಅವರ ಕಂಗಳಲ್ಲಿ ಮೂರನೇ ಕಣ್ಣಿನಂತೆ ಕ್ಯಾಮೆರಾದ ಹಿಂದಿನ ಗತಕಾಲದ ಘಟನೆಗಳ ರೀಲುಗಳು ಚಕ್‌ಚಕ್‌ನೆ ಸುತ್ತಿದ ಅನುಭವವಾಗುತ್ತದೆ.

ಮಹೇಂದ್ರಕರ ಕುಟುಂಬದ ಮುಂದಿನ ಪೀಳಿಗೆಯವರೂ ಛಾಯಾಗ್ರಹಣ ಕ್ಷೇತ್ರದಿಂದ ದೂರವಾಗಲಿಲ್ಲ. ಅವರ ಮಕ್ಕಳು ಗುತ್ತಿಗೆ ಆಧಾರದ ಮೇಲೆ ವಿಶ್ವವಿದ್ಯಾಲಯದ ಛಾಯಾಗ್ರಾಹಕರಾಗಿ ಕಾರ್ಯನಿರ್ವಹಿಸಿದ್ದಾರೆ. ನವೋದಯ ಹಾಗೂ ವಾರ್ತಾ ಇಲಾಖೆಯ ಛಾಯಾಗ್ರಾಹಕರಾಗಿಯೂ ಸೇವೆ ಸಲ್ಲಿಸಿದ್ದಾರೆ. ಇವರ ಸಹೋದರರೊಬ್ಬರು ಪೊಲೀಸ್ ಇಲಾಖೆಯ ಛಾಯಾಗ್ರಾಹಕರಾಗಿ ಸೇವೆ ಸಲ್ಲಿಸಿದ್ದು, ಸಹೋದರರ ಮಗ ಚೋಟು' ಕಿತ್ತೂರು ಕರ್ನಾಟಕ ಪತ್ರಿಕೆಯ ಛಾಯಾಗ್ರಾಹಕರಾಗಿ ಕಾರ್ಯನಿರ್ವಹಿಸಿದ್ದಾರೆ. ಹೀಗೆ ಒಂದು ಕುಟುಂಬವೇ ಹಲವು ದಶಕಗಳ ಕಾಲ ಛಾಯಾಗ್ರಹಣದೊಂದಿಗೆ ಬೆಸೆದುಕೊಂಡಿರುವುದು ಗದಗದ ಛಾಯಾಗ್ರಹಣ ಕ್ಷೇತ್ರದ ವಿಶೇಷತೆಯಾಗಿದೆ.

### 37 ವರ್ಷಗಳಿಂದ ಕ್ಯಾಮೆರಾ ಕೊರಳಲ್ಲಿಟ್ಟ ಬನೇಶ್ ಕುಲಕರ್ಣಿ

ಪ್ರಜಾವಾಣಿ ಪತ್ರಿಕೆಯ ಛಾಯಾಗ್ರಾಹಕ ಬನೇಶ್ ಕುಲಕರ್ಣಿ ಕಳೆದ 37 ವರ್ಷಗಳಿಂದ ಕ್ಯಾಮೆರಾವನ್ನು ಕೊರಳಿಗೆ ಹಾಕಿಕೊಂಡು ಛಾಯಾಗ್ರಹಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಈಟಿವಿ ಹಾಗೂ ಉದಯ ಟಿವಿಯಲ್ಲಿಯೂ ಕ್ಯಾಮೆರಾಮನ್ ಮತ್ತು ಛಾಯಾಗ್ರಾಹಕರಾಗಿ ಕಾರ್ಯನಿರ್ವಹಿಸಿದ ಅವರು, ಪ್ರಸ್ತುತ ಪ್ರಜಾವಾಣಿಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಸುದ್ದಿ, ಘಟನೆ, ವ್ಯಕ್ತಿ ಮತ್ತು ಸಂದರ್ಭಗಳನ್ನು ನಿಖರವಾಗಿ ದಾಖಲಿಸುವ ಮೂಲಕ ಪತ್ರಿಕೋದ್ಯಮದ ಛಾಯಾಗ್ರಹಣಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ.



### ತಂದೆಯಿಂದ ಬಂದ ಛಾಯಾಗ್ರಹಣದ ಬಳುವಳಿ

ವಿಜಯ ಕರ್ನಾಟಕದ ಜಿಲ್ಲಾ ವರದಿಗಾರ ಸಲೀಂ ಬಳಬಟ್ಟಿ ಅವರ ಛಾಯಾಗ್ರಹಣದ ಆಸಕ್ತಿ ಹಾಗೂ ವಿಶೇಷ ದೃಷ್ಟಿಕೋನ ತಂದೆಯಿಂದ ಬಂದ ಬಳುವಳಿ. ಅವರ ತಂದೆ ಬಂಡಾಯ ಸಾಹಿತಿ, ಕವಿ, ರಂಗಭೂಮಿ ಕಲಾವಿದ ಹಾಗೂ ಛಾಯಾಗ್ರಾಹಕ ಬಿ. ಬಾಬು ಅವರಿಂದ ಛಾಯಾಗ್ರಹಣದ ಕಲೆಯನ್ನು ಕಲಿತು ಬೆಳೆಸಿಕೊಂಡಿದ್ದಾರೆ.

ಸಮೂಹ ಸಂವಹನ ಮತ್ತು ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದ ಸಲೀಂ ಬಳಬಟ್ಟಿ ಅವರು 2008ರಲ್ಲಿ ಕರ್ನಾಟಕ ಫೋಟೋ ನ್ಯೂಸ್ ಸಂಸ್ಥೆಯ ಫೋಟೋ ಜರ್ನಲಿಸ್ಟ್ ಆಗಿ ಸೇವೆ ಆರಂಭಿಸಿದರು. ಬಳಿಕ ಉದಯವಾಣಿ ಹಾಗೂ ಕನ್ನಡಪ್ರಭ ಪತ್ರಿಕೆಗಳಲ್ಲಿ ವರದಿಗಾರರಾಗಿ, ವಿಶ್ವವಾಣಿ ಪತ್ರಿಕೆಯಲ್ಲಿ ಉಪಸಂಪಾದಕರಾಗಿಯೂ ಸೇವೆ ಸಲ್ಲಿಸಿದ್ದಾರೆ. ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ಮಟ್ಟದ ಛಾಯಾಚಿತ್ರ ಪ್ರದರ್ಶನಗಳಲ್ಲಿ ಭಾಗವಹಿಸಿ ಪ್ರಶಸ್ತಿಗಳನ್ನೂ ತಮ್ಮದಾಗಿಸಿಕೊಂಡಿದ್ದಾರೆ.

### ಕ್ಯಾಮೆರಾ ಕಟ್ಟಿದ ಕೊರಳು ನೂರು ಕೊರಳುಗಳ ಬಗ್ಗೆ ಚಿಂತಿಸಬೇಕು



ಕಳೆದ 34 ವರ್ಷಗಳಿಂದ ಕ್ಯಾಮೆರಾವನ್ನು ಕೊರಳಿಗೆ ಹಾಕಿಕೊಂಡು ಸಾಗುತ್ತಿರುವ ಜಂಗಮು ಮುತ್ತು ಹಾಳಕೇರಿ ಅವರು ಛಾಯಾಗ್ರಹಣವನ್ನು ಕೇವಲ ವೃತ್ತಿಯಾಗಿ ನೋಡದೆ, ಸಾಮಾಜಿಕ ಜವಾಬ್ದಾರಿಯನ್ನೂ ಹೊತ್ತ ಕಲೆಯಾಗಿ ಪರಿಗಣಿಸಿದ್ದಾರೆ.

ಫೋಟೋಗ್ರಾಫರ್ ಚಿತ್ರ ಮಾತ್ರ ತೆಗೆಯುವುದಲ್ಲ, ತನ್ನನ್ನು ತಾನೇ ಪ್ರಶ್ನಿಸಿಕೊಳ್ಳಬೇಕು. ಕ್ಯಾಮೆರಾ ಕಟ್ಟಿದ ಕೊರಳು ನೂರು ಕೊರಳುಗಳ ಬಗ್ಗೆ ಚಿಂತಿಸಬೇಕು. ಪ್ರಚಲಿತ ಸಮಸ್ಯೆಗಳು, ಗ್ರಾಮೀಣ ಬದುಕು ಹಾಗೂ ಜನರ ಜೀವನದ ಬಗ್ಗೆ ಚಿಂತಿಸಬೇಕು ಎಂಬುದು ಮುತ್ತು ಅವರ ಆಶಯ.

ಅಲೆಮಾರಿ ಕುರಿಗಾಯಿಗಳು ನೀರಿಗಾಗಿ ಅಲೆಯುವ ಬದುಕನ್ನು ಬಿಂಬಿಸುವ ಮುತ್ತು ಅವರು ತೆಗೆದ ಛಾಯಾಚಿತ್ರವೊಂದು 25 ಸಾವಿರ ರೂ. ಬಹುಮಾನ ಪಡೆದಿದೆ. ವಿಶೇಷವೆಂದರೆ, ಆ ಬಹುಮಾನದ ಮೊತ್ತವನ್ನೇ ಅವರು ಕುರಿಗಾಯಿಗಳಿಗೆ ಕಾಣಿಕೆಯಾಗಿ ನೀಡಿ ಮಾನವೀಯತೆ ಮೆರೆದಿದ್ದಾರೆ.

ನಾಡಿನಾದ್ಯಂತ ಮುತ್ತು ಅವರ ಛಾಯಾಚಿತ್ರಗಳು ಪ್ರದರ್ಶನಗೊಂಡಿವೆ. ಮದುವೆ ಕ್ಷಣಗಳು' ಎಂಬ ಶೀರ್ಷಿಕೆಯಡಿ ಸುವರ್ಣ ನ್ಯೂಸ್ ಆಯೋಜಿಸಿದ್ದ ರಾಜ್ಯಮಟ್ಟದ ಛಾಯಾಚಿತ್ರ ಸ್ಪರ್ಧೆಯಲ್ಲಿ ದ್ವಿತೀಯ ಬಹುಮಾನ ಪಡೆದ ಹೆಗ್ಗಳಿಕೆಯೂ ಅವರದ್ದಾಗಿದೆ. ಪ್ರಗತಿಪರ ಸಂಘಟನೆಗಳ ಕಾರ್ಯಕ್ರಮಗಳಲ್ಲಿ ಮುತ್ತು ಅವರ ಹಾಜರಾತಿ ಸಾಮಾನ್ಯವಾಗಿದ್ದು, ಸಮಾಜಮುಖಿ ಚಿಂತನೆಗಳೊಂದಿಗೆ ಅವರು ತಮ್ಮ ಕ್ಯಾಮೆರಾವನ್ನು ಬಳಸಿಕೊಂಡಿದ್ದಾರೆ.

### ಗದಗದ ಪತ್ರಿಕಾ ಲೋಕದಲ್ಲಿ ಹಲವು ಕ್ಯಾಮೆರಾ ಕಣ್ಣುಗಳು





ಗದಗದ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಹಲವು ವರ್ಷಗಳಿಂದ ಛಾಯಾಗ್ರಹಣದ ಮೂಲಕ ಗಮನ ಸೆಳೆದವರಲ್ಲಿ ರಾಮು ವಗ್ಗಿ ಹಾಗೂ ಲಕ್ಷ್ಮಣ ವಗ್ಗಿ ಅವರೂ ಪ್ರಮುಖರು. ಸಾರ್ವಜನಿಕ ಸಭೆ, ಸಮಾರಂಭಗಳು ಹಾಗೂ ಸರ್ಕಾರಿ ಕಾರ್ಯಕ್ರಮಗಳ ಅಪರೂಪದ ಕ್ಷಣಗಳನ್ನು ಕ್ರಮವಾಗಿ ವಿಜಯ ಕರ್ನಾಟಕ ಹಾಗೂ ಉದಯವಾಣಿ ಪತ್ರಿಕೆಗಳಿಗಾಗಿ ಸೆರೆಹಿಡಿದು ಓದುಗರ ಗಮನ ಸೆಳೆದಿದ್ದಾರೆ.

ಗದಗ ಉತ್ಸವ, ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಹಲವು ಪ್ರಶಸ್ತಿಪುರಸ್ಕಾರಗಳು ಜಿಲ್ಲೆಯ ಛಾಯಾಗ್ರಾಹಕರ ಸಾಧನೆಗೆ ಮತ್ತಷ್ಟು ಮೆರುಗು ತಂದಿವೆ.

ಸಂಜೆವಾಣಿ ಪತ್ರಿಕೆಯ ಬಸವರಾಜ ದಂಡಿನ ಅವರು ಹಿರಿಯ ಪತ್ರಕರ್ತರಾಗಿ ಮಾತ್ರವಲ್ಲ, ಛಾಯಾಗ್ರಾಹಕರಾಗಿಯೂ ಗುರುತಿಸಿಕೊಂಡಿದ್ದಾರೆ. ಸಮಾಜಮುಖಿ ಚಿಂತನೆಗಳ ಬರವಣಿಗೆಯಲ್ಲಿ ತೊಡಗಿಕೊಂಡಿರುವ ಅವರು ನಾಡಿನ ಅನೇಕ ಪತ್ರಿಕೆಗಳು ಹಾಗೂ ಸಂಘಟನೆಗಳಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಶಂಕರ್ ಗುರಿಕಾರ, ಉಮೇಶ್ ಸಜ್ಜನ ಸೇರಿದಂತೆ ಜಿಲ್ಲೆಯಾದ್ಯಂತ ಇನ್ನೂ ಅನೇಕ ಪತ್ರಿಕಾ ಛಾಯಾಚಿತ್ರ ಕಲಾವಿದರು ತಮ್ಮ ವೃತ್ತಿ ಹಾಗೂ ಕಲೆಯ ಮೂಲಕ ಪತ್ರಿಕೋದ್ಯಮಕ್ಕೆ ಸೇವೆ ಸಲ್ಲಿಸುತ್ತಿದ್ದಾರೆ.

### ಎಐ ಮೊಬೈಲ್ ಯುಗದಲ್ಲೂ ಉಳಿಸಿಕೊಂಡಿದ್ದಾರೆ ತಮ್ಮತನ



ಇಂದು ಕೃತಕ ಬುದ್ಧಿಮತ್ತೆ (ಎಐ), ಮೊಬೈಲ್ ಕ್ಯಾಮೆರಾ ಮತ್ತು ಡಿಜಿಟಲ್ ತಂತ್ರಜ್ಞಾನಗಳು ಛಾಯಾಗ್ರಹಣದ ಸ್ವರೂಪವನ್ನೇ ಬದಲಿಸುತ್ತಿವೆ. ಕ್ಷಣಮಾತ್ರದಲ್ಲಿ ಚಿತ್ರ ಸೆರೆಹಿಡಿಯುವುದು, ಸಂಪಾದಿಸುವುದು ಹಾಗೂ ಜಗತ್ತಿನ ಯಾವುದೇ ಮೂಲೆಗೆ ತಲುಪಿಸುವುದು ಸಾಧ್ಯವಾಗಿದೆ. ಆದರೂ ಪತ್ರಿಕಾ ಛಾಯಾಗ್ರಾಹಕನ ಅನುಭವ, ಸ್ಥಳದ ಅರಿವು, ಜನರೊಂದಿಗೆ ಬೆರೆಯುವ ಗುಣ, ಸರಿಯಾದ ಕ್ಷಣವನ್ನು ಗುರುತಿಸುವ ದೃಷ್ಟಿ ಮತ್ತು ಸಾಮಾಜಿಕ ಸಂವೇದನೆಗೆ ಪರ್ಯಾಯವಿಲ್ಲ.

ಎಐ ಮತ್ತು ಮೊಬೈಲ್‌ಗಳ ಹಾವಳಿಯ ನಡುವೆಯೂ ತಮ್ಮತನವನ್ನು ಉಳಿಸಿಕೊಂಡು ಪತ್ರಿಕಾ ಛಾಯಾಚಿತ್ರಕಾರರಾಗಿ ನೇರ ಹಾಗೂ ಪರೋಕ್ಷವಾಗಿ ಪತ್ರಿಕೋದ್ಯಮದ ಘನತೆ ಮತ್ತು ಗೌರವವನ್ನು ಎತ್ತಿಹಿಡಿಯುತ್ತಿರುವುದು ನಿಜಕ್ಕೂ ಅಭಿಮಾನದ ಸಂಗತಿ. ವಿಶ್ವ ಛಾಯಾಗ್ರಾಹಕರ ದಿನವು ಕೇವಲ ಛಾಯಾಗ್ರಾಹಕರಿಗೆ ಶುಭಾಶಯ ಕೋರುವ ದಿನವಲ್ಲ. ಕಾಲವನ್ನು ಸೆರೆಹಿಡಿದು ನೆನಪುಗಳಿಗೆ ಜೀವ ನೀಡುವ ಪ್ರತಿಯೊಬ್ಬ ಛಾಯಾಗ್ರಾಹಕನ ಕಲೆಯನ್ನು ಗೌರವಿಸುವ ದಿನ. ಅವರ ಕ್ಯಾಮೆರಾದ ಕಣ್ಣು ಸಮಾಜವನ್ನು ನೋಡುವ ಮತ್ತೊಂದು ಸೂಕ್ಷ್ಮ ಕಣ್ಣು.

ಕ್ಷಣಗಳು ಕಳೆದುಹೋಗುತ್ತವೆ... ಕಾಲ ಮುಂದೆ ಸಾಗುತ್ತದೆ... ಆದರೆ ಆ ಕ್ಷಣವನ್ನು ಸೆರೆಹಿಡಿದ ಛಾಯಾಚಿತ್ರ ಮಾತ್ರ ಚಿರಂತನವಾಗಿ ಉಳಿಯುತ್ತದೆ.

ವಿಶ್ವ ಛಾಯಾಗ್ರಾಹಕರ ದಿನದಂದು ಕ್ಷಣಗಳಿಗೆ ಚಿರಂತನತೆ ನೀಡುವ ಜಿಲ್ಲೆಯ ಹಾಗೂ ನಾಡಿನ ಎಲ್ಲ ಛಾಯಾಗ್ರಾಹಕರಿಗೆ ಹೃತ್ಪೂರ್ವಕ ಶುಭಾಶಯಗಳು.

**– ಎ. ಎಸ್. ಮಕಾನದಾರ**
**ಕವಿ, ಪ್ರಕಾಶಕ, ಸಂಪಾದಕ, ನಿರಂತರ ಪ್ರಕಾಶನ, ಗದಗ**

---

ಸ್ವಂತ ಖರ್ಚಿನಲ್ಲಿ ಉದ್ಯಾನವನ, ಗೋಡೆಗಳಿಗೆ ಆಕರ್ಷಕ ಬಣ್ಣ; ಅಧಿಕಾರಿಗಳ ಕಾರ್ಯಕ್ಕೆ ಸಾರ್ವಜನಿಕರ ಮೆಚ್ಚುಗೆ

# ನೋಡುಗರ ಕಣ್ಣು ಸೆಳೆಯುತ್ತಿದೆ ನರೇಗಲ್ಲ ಪಟ್ಟಣ ಪಂಚಾಯಿತಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಆಡಳಿತದ ಪ್ರಮುಖ ಕೇಂದ್ರವಾಗಿರುವ ಪಟ್ಟಣ ಪಂಚಾಯಿತಿ ಕಚೇರಿ ಇದೀಗ ಹೊಸ ರೂಪದಲ್ಲಿ ಕಂಗೊಳಿಸುತ್ತಿದ್ದು, ನೋಡುಗರ ಕಣ್ಣು ಸೆಳೆಯುತ್ತಿದೆ. ಕಚೇರಿ ಮುಂಭಾಗದ ಉದ್ಯಾನವನ ಹಾಗೂ ಗೋಡೆಗಳಿಗೆ ಆಕರ್ಷಕ ಬಣ್ಣ ಬಳಿದು ಆವರಣವನ್ನು ಸುಂದರಗೊಳಿಸಿರುವುದು ಸಾರ್ವಜನಿಕರ ಗಮನ ಸೆಳೆದಿದೆ.

ಪಟ್ಟಣ ಪಂಚಾಯಿತಿಯ ಕಿರಿಯ ಅಭಿಯಂತರ ನಾಡಿಗರ ಜಡೆಪ್ಪ ಅವರು ತಮ್ಮ ಸ್ವಂತ ಖರ್ಚಿನಲ್ಲಿ ಉದ್ಯಾನವನ ಹಾಗೂ ಗೋಡೆಗಳಿಗೆ ಬಣ್ಣ ಬಳಿಸುವ ಕಾರ್ಯ ಕೈಗೊಂಡಿದ್ದು, ಕಚೇರಿ ಆವರಣಕ್ಕೆ ಹೊಸ ಮೆರುಗು ತಂದಿದ್ದಾರೆ. ಅವರ ಈ ವೈಯಕ್ತಿಕ ಕಾಳಜಿಗೆ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಲ್ಲೇಶ ಪಚ್ಚಿ ಹಾಗೂ ಸಿಬ್ಬಂದಿಯೂ ಕೈಜೋಡಿಸಿರುವುದು ವಿಶೇಷವಾಗಿದೆ.

ಕೆಲ ದಿನಗಳ ಹಿಂದೆ ಸಾಮಾನ್ಯವಾಗಿ ಕಾಣುತ್ತಿದ್ದ ಕಚೇರಿ ಆವರಣ ಇದೀಗ ಆಕರ್ಷಕವಾಗಿ ಕಾಣಿಸುತ್ತಿದೆ. ಉದ್ಯಾನವನದ ಸುತ್ತಲಿನ ಗೋಡೆಗಳಿಗೆ ಬಣ್ಣ ಬಳಿದು, ಆವರಣವನ್ನು ಸ್ವಚ್ಛ ಹಾಗೂ ಸುಂದರವಾಗಿ ಇಡುವ ಪ್ರಯತ್ನ ಮಾಡಲಾಗಿದೆ. ವಿವಿಧ ಕೆಲಸಗಳಿಗಾಗಿ ಪ್ರತಿನಿತ್ಯ ಪಟ್ಟಣ ಪಂಚಾಯಿತಿಗೆ ಆಗಮಿಸುವ ಸಾರ್ವಜನಿಕರು ಕಚೇರಿಯ ಬದಲಾಗಿರುವ ವಾತಾವರಣವನ್ನು ಗಮನಿಸಿ ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ.





ಸರ್ಕಾರಿ ಕಚೇರಿ ಎಂದರೆ ಕೇವಲ ಕಡತಗಳ ವಿಲೇವಾರಿ ನಡೆಯುವ ಸ್ಥಳವಲ್ಲ. ಸಾರ್ವಜನಿಕರಿಗೆ ಉತ್ತಮ ಹಾಗೂ ಆಹ್ಲಾದಕರ ವಾತಾವರಣ ಕಲ್ಪಿಸುವ ಜವಾಬ್ದಾರಿಯೂ ಆಡಳಿತದ ಮೇಲಿದೆ.

ಈ ಹಿನ್ನೆಲೆಯಲ್ಲಿ ಕಿರಿಯ ಅಭಿಯಂತರರು ಸ್ವಂತ ಹಣದಲ್ಲಿ ಕೈಗೊಂಡಿರುವ ಸೌಂದರ್ಯೀಕರಣ ಕಾರ್ಯ ಗಮನಾರ್ಹವಾಗಿದೆ. ತಾನು ಕೆಲಸ ಮಾಡುವ ಕಚೇರಿಯ ಪರಿಸರದ ಬಗ್ಗೆ ಅಧಿಕಾರಿಯೊಬ್ಬರು ವೈಯಕ್ತಿಕ ಕಾಳಜಿ ವಹಿಸಿರುವುದು ಇತರರಿಗೂ ಮಾದರಿಯಾಗಬೇಕು ಎಂಬ ಅಭಿಪ್ರಾಯ ಸಾರ್ವಜನಿಕರಿಂದ ವ್ಯಕ್ತವಾಗಿದೆ.

## ಅಧಿಕಾರಿಗಳ ಕಾಳಜಿ ಮಾದರಿಯಾಗಲಿ

**ಕಿರಿಯ ಅಭಿಯಂತರರ ಸ್ವಂತ ಖರ್ಚಿನ ಕಾಳಜಿ, ಮುಖ್ಯಾಧಿಕಾರಿ ಹಾಗೂ ಸಿಬ್ಬಂದಿಯ ಸಹಕಾರದಿಂದ ನರೇಗಲ್ಲ ಪಟ್ಟಣ ಪಂಚಾಯಿತಿ ಕಚೇರಿ ಆವರಣ ಇದೀಗ ಹೊಸ ರೂಪ ಪಡೆದುಕೊಂಡಿದ್ದು, ಕಚೇರಿ ಅಂದರೆ ಹೀಗಿರಬೇಕು' ಎನ್ನುವಂತೆ ನೋಡುಗರ ಕಣ್ಣು ಸೆಳೆಯುತ್ತಿದೆ. ಅಧಿಕಾರಿಗಳು ಮತ್ತು ಸಿಬ್ಬಂದಿ ತೋರಿಸಿರುವ ಈ ಕಾಳಜಿ ಇತರೆ ಸರ್ಕಾರಿ ಕಚೇರಿಗಳಿಗೂ ಮಾದರಿಯಾಗಲಿ ಎಂಬುದು ನಾಗರಿಕರ ಆಶಯ.**

ಕಿರಿಯ ಅಭಿಯಂತರರ ಪ್ರಯತ್ನಕ್ಕೆ ಮುಖ್ಯಾಧಿಕಾರಿ ಹಾಗೂ ಸಿಬ್ಬಂದಿ ಸಹಕಾರ ನೀಡಿದ್ದು, ಸ್ವಚ್ಛತೆ ಮತ್ತು ಸೌಂದರ್ಯೀಕರಣದ ಕಾರ್ಯದಲ್ಲಿ ಕೈಜೋಡಿಸಿದ್ದಾರೆ. ಅಧಿಕಾರಿ ಹಾಗೂ ಸಿಬ್ಬಂದಿ ಒಟ್ಟಾಗಿ ಕೆಲಸ ಮಾಡುವ ಮೂಲಕ ಕಚೇರಿ ಆವರಣವನ್ನು ಸಾರ್ವಜನಿಕರಿಗೆ ಆಹ್ಲಾದಕರವಾಗಿಸುವ ಪ್ರಯತ್ನ ಮಾಡಿರುವುದು ಮೆಚ್ಚುಗೆಗೆ ಪಾತ್ರವಾಗಿದೆ.

ಕಚೇರಿ ಕಟ್ಟಡ ಸುಂದರವಾಗಿರುವುದಷ್ಟೇ ಸಾಲದು. ಅದರ ಸುತ್ತಮುತ್ತಲಿನ ಪರಿಸರವೂ ಸ್ವಚ್ಛವಾಗಿರಬೇಕು. ಈ ನಿಟ್ಟಿನಲ್ಲಿ ಉದ್ಯಾನವನ ಮತ್ತು ಗೋಡೆಗಳ ಸೌಂದರ್ಯೀಕರಣದ ಜೊತೆಗೆ ಆವರಣವನ್ನು ಸ್ವಚ್ಛವಾಗಿಡುವತ್ತಲೂ ಗಮನ ಹರಿಸಲಾಗಿದೆ.

ಪಟ್ಟಣ ಪಂಚಾಯಿತಿಗೆ ಬರುವ ಪ್ರತಿಯೊಬ್ಬ ನಾಗರಿಕನಿಗೂ ಸ್ವಚ್ಛ ಹಾಗೂ ಸುಂದರ ವಾತಾವರಣ ದೊರೆಯುವಂತಾಗಬೇಕು ಎಂಬ ಉದ್ದೇಶದಿಂದ ಕೈಗೊಂಡಿರುವ ಈ ಕಾರ್ಯ ಮುಂದುವರಿಯಬೇಕು ಎಂಬುದು ಸಾರ್ವಜನಿಕರ ಆಶಯವಾಗಿದೆ.

ಸರ್ಕಾರಿ ಸಂಸ್ಥೆಗಳ ಅಭಿವೃದ್ಧಿ ಎಂದರೆ ಕೇವಲ ದೊಡ್ಡ ಕಾಮಗಾರಿಗಳಲ್ಲ. ಸಣ್ಣ-ಸಣ್ಣ ಬದಲಾವಣೆಗಳೂ ಸಾರ್ವಜನಿಕರಲ್ಲಿ ಉತ್ತಮ ಭಾವನೆ ಮೂಡಿಸುತ್ತವೆ. ಉದ್ಯಾನವನಕ್ಕೆ ಬಣ್ಣ ಬಳಿಯುವುದು, ಗೋಡೆಗಳನ್ನು ಸುಂದರಗೊಳಿಸುವುದು ಹಾಗೂ ಕಚೇರಿ ಆವರಣವನ್ನು ಸ್ವಚ್ಛವಾಗಿಡುವುದು ಕೂಡ ಸಾರ್ವಜನಿಕ ಸೇವೆಯ ಭಾಗವೇ ಆಗಿದೆ ಎಂಬುದನ್ನು ನರೇಗಲ್ಲ ಪಟ್ಟಣ ಪಂಚಾಯಿತಿ ಸಿಬ್ಬಂದಿಯ ಕಾರ್ಯ ತೋರಿಸಿಕೊಟ್ಟಿದೆ.

> **ಪಟ್ಟಣ ಪಂಚಾಯಿತಿ ಕಚೇರಿ ಕೇವಲ ಆಡಳಿತದ ಕೇಂದ್ರವಾಗಿರದೆ, ಸಾರ್ವಜನಿಕರಿಗೆ ಸ್ವಚ್ಛ ಹಾಗೂ ಸುಂದರ ವಾತಾವರಣ ನೀಡುವ ಸ್ಥಳವಾಗಬೇಕು. ಕಿರಿಯ ಅಭಿಯಂತರರು ಸ್ವಂತ ಖರ್ಚಿನಲ್ಲಿ ಉದ್ಯಾನವನ ಹಾಗೂ ಗೋಡೆಗಳಿಗೆ ಬಣ್ಣ ಬಳಿಸುವ ಮೂಲಕ ಉತ್ತಮ ಕಾಳಜಿ ತೋರಿದ್ದಾರೆ. ಸಿಬ್ಬಂದಿಯ ಸಹಕಾರದೊಂದಿಗೆ ಕಚೇರಿ ಆವರಣವನ್ನು ಇನ್ನಷ್ಟು ಸುಂದರ ಹಾಗೂ ಸ್ವಚ್ಛವಾಗಿ ಇಡಲು ಆದ್ಯತೆ ನೀಡಲಾಗುವುದು.**
>
> **– ಮಲ್ಲೇಶ ಪಚ್ಚಿ**, ಮುಖ್ಯಾಧಿಕಾರಿ, ನರೇಗಲ್ಲ ಪಟ್ಟಣ ಪಂಚಾಯಿತಿ

> **ಪಟ್ಟಣ ಪಂಚಾಯಿತಿ ಕಚೇರಿ ನಮ್ಮೆಲ್ಲರ ಸಾರ್ವಜನಿಕ ಸಂಸ್ಥೆ. ಕಚೇರಿ ಆವರಣ ಮತ್ತು ಉದ್ಯಾನವನವನ್ನು ಸ್ವಚ್ಛವಾಗಿ, ಸುಂದರವಾಗಿ ಇಡಬೇಕು ಎಂಬ ಉದ್ದೇಶದಿಂದ ನನ್ನ ಸ್ವಂತ ಖರ್ಚಿನಲ್ಲಿ ಬಣ್ಣ ಬಳಿಸುವ ಕೆಲಸ ಮಾಡಿದ್ದೇನೆ. ಇದರಿಂದ ಸಾರ್ವಜನಿಕರಿಗೆ ಉತ್ತಮ ವಾತಾವರಣ ಸಿಗುತ್ತದೆ ಎಂಬ ಸಂತೋಷವಿದೆ.**
>
> **– ನಾಡಿಗರ ಜಡೆಪ್ಪ**, ಕಿರಿಯ ಅಭಿಯಂತರ, ನರೇಗಲ್ಲ ಪಟ್ಟಣ ಪಂಚಾಯಿತಿ

---

# ರೈಲು ಹರಿದು ಅಪರಿಚಿತ ವ್ಯಕ್ತಿ ಸಾವು; ವಾರಸುದಾರರ ಪತ್ತೆಗೆ ಮನವಿ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ರೈಲ್ವೆ ನಿಲ್ದಾಣದ ಸಮೀಪ ಮೈಸೂರುಹುಬ್ಬಳ್ಳಿ (ಗೋಲ ಗುಂಬಜ್) ಎಕ್ಸ್‌ಪ್ರೆಸ್ ರೈಲು ಹರಿದು ಸುಮಾರು 6065 ವರ್ಷದ ಅಪರಿಚಿತ ವ್ಯಕ್ತಿಯೊಬ್ಬರು ಮೃತಪಟ್ಟಿರುವ ಘಟನೆ ಸೋಮವಾರ ನಡೆದಿದೆ. ಮೃತ ವ್ಯಕ್ತಿಯ ಗುರುತು ಪತ್ತೆಯಾಗದ ಹಿನ್ನೆಲೆಯಲ್ಲಿ ಗದಗ ರೈಲ್ವೆ ಪೊಲೀಸ್ ಠಾಣೆಯಲ್ಲಿ ಯುಡಿಆರ್ ನಂ. 36/2026, ಕಲಂ 194 ಬಿಎನ್‌ಎಸ್‌ಎಸ್ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ. ಮೃತನ ವಾರಸುದಾರರ ಪತ್ತೆಗೆ ಪೊಲೀಸರು ಸಾರ್ವಜನಿಕರ ಸಹಕಾರ ಕೋರಿದ್ದಾರೆ. ಮೃತ ವ್ಯಕ್ತಿ ದುಂಡು ಮುಖ, ಅಗಲವಾದ ಹಣೆ ಹಾಗೂ ಮೂಗು, ಸಾಧಾರಣ ಗಪ್ಪು ಮೈಬಣ್ಣ, ಸದೃಢ ಮೈಕಟ್ಟು ಹೊಂದಿದ್ದು, ಸುಮಾರು 5.2 ಅಡಿ ಎತ್ತರವಿದ್ದಾನೆ. ತಲೆಯಲ್ಲಿ 23 ಇಂಚು ಉದ್ದದ ಕಪ್ಪುಬಿಳಿ ಕೂದಲಿದ್ದು, ಸುಮಾರು ಅರ್ಧ ಇಂಚು ಮೀಸೆ ಹೊಂದಿದ್ದಾನೆ. ಮೃತನ ಮೈಮೇಲೆ ಬಿಳಿ ಬಣ್ಣದ ಫುಲ್‌ಶರ್ಟ, ನೀಲಿ ಬಣ್ಣದ ಪ್ಯಾಂಟ್, ಬಿಳಿ ಬಣ್ಣದ ಬನಿಯನ್ ಹಾಗೂ ಕೆಂಪು ಬಣ್ಣದ ಒಳಉಡುಪು ಇತ್ತು ಎಂದು ಪೊಲೀಸರು ತಿಳಿಸಿದ್ದಾರೆ. ಮೃತ ವ್ಯಕ್ತಿಯ ಕುರಿತು ಮಾಹಿತಿ ಅಥವಾ ವಾರಸುದಾರರ ಸುಳಿವು ದೊರೆತಲ್ಲಿ ಗದಗ ರೈಲ್ವೆ ಪೊಲೀಸ್ ಠಾಣೆ: 08372-278744, ಮೊ. 9480802128 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080-22871291ಕ್ಕೆ ಮಾಹಿತಿ ನೀಡುವಂತೆ ಕೋರಲಾಗಿದೆ.

---

# ಸೆ.12ರಂದು ನಾಗಾವಿಯಲ್ಲಿ ಸರ್ವಧರ್ಮ ಸಾಮೂಹಿಕ ವಿವಾಹ

**ವಿಜಯಸಾಕ್ಷಿ ಸುದ್ದಿ, ಗದಗ**


ಶ್ರಾವಣ ಮಾಸದ ಅಂಗವಾಗಿ ನಾಗಾವಿ ಗ್ರಾಮದಲ್ಲಿ ಆರಂಭಗೊಂಡಿರುವ ಶ್ರೀ ಶರಣ ಬಸವೇಶ್ವರ ಪುರಾಣವು ಸೆ.12ರಂದು ಮಹಾಮಂಗಲಗೊಳ್ಳಲಿದ್ದು, ಇದರ ಅಂಗವಾಗಿ ಸರ್ವಧರ್ಮಗಳ ಸಾಮೂಹಿಕ ವಿವಾಹ ಕಾರ್ಯಕ್ರಮ ಆಯೋಜಿಸಲಾಗಿದೆ.

ಸಾಮೂಹಿಕ ವಿವಾಹದಲ್ಲಿ ಪಾಲ್ಗೊಳ್ಳಲು ಇಚ್ಛಿಸುವ ಅರ್ಹ ವಧು-ವರರು ಆಗಸ್ಟ್ 31ರೊಳಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಶ್ರೀ ಶರಣ ಬಸವೇಶ್ವರ ಪುರಾಣ ಸಮಿತಿಯನ್ನು ಸಂಪರ್ಕಿಸುವಂತೆ ಸಂಚಾಲಕ ಬಿ.ಎಸ್. ಚಿಂಚಲಿ ಮನವಿ ಮಾಡಿದ್ದಾರೆ.

## ಸಂಕ್ಷಿಪ್ತ ಸುದ್ದಿಗಳು

## ಲಕ್ಕುಂಡಿಯಲ್ಲಿ ಇಂದಿನಿಂದ ಶರಣರ ತತ್ವ ಚಿಂತನೆ ಪ್ರವಚನ

**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**



ಶ್ರಾವಣ ಮಾಸದ ಅಂಗವಾಗಿ ಇಲ್ಲಿಯ ಅನ್ನದಾನೀಶ್ವರ ಶಾಖಾ ಮಠದಲ್ಲಿ ಶರಣರ ತತ್ವ ಚಿಂತನೆ ಪ್ರವಚನ ಕಾರ್ಯಕ್ರಮ ಆ.18ರಿಂದ ಪ್ರತಿದಿನ ಸಂಜೆ 8 ಗಂಟೆಗೆ ನಡೆಯಲಿದೆ. ಮುಂಡರಗಿ ಅನ್ನದಾನೀಶ್ವರ ಮಠದ ಡಾ. ಅನ್ನದಾನೀಶ್ವರ ಮಹಾಸ್ವಾಮಿಗಳು ಸಾನಿಧ್ಯ ವಹಿಸಿ ಕಾರ್ಯಕ್ರಮ ಉದ್ಘಾಟಿಸುವರು. ಹರ್ಲಾಪೂರ ಕೊಟ್ಟೂರೇಶ್ವರ ಮಠದ ಡಾ. ಕೊಟ್ಟೂರೇಶ್ವರ ಶ್ರೀಗಳು, ಕುಕನೂರು ಅನ್ನದಾನೀಶ್ವರ ಮಠದ ಡಾ. ಮಹಾದೇವ ಮಹಾಸ್ವಾಮಿಗಳು, ಶಂಕ್ರಯ್ಯ ಹಿರೇಮಠ, ಶಾಸಕ ಹಾಗೂ ಮಾಜಿ ಸಚಿವ ಸಿ.ಸಿ. ಪಾಟೀಲ, ಮಾಜಿ ಶಾಸಕ ಬಿ.ಆರ್. ಯಾವಗಲ್ ಸೇರಿದಂತೆ ಗ್ರಾಮದ ಗಣ್ಯರು ಪಾಲ್ಗೊಳ್ಳುವರು. ಗದಗ ನಗರದ ಡಾ. ಗಿರಿಜಾ ಹಸಬಿ ಅವರು ಪ್ರವಚನ ನೀಡಲಿದ್ದು, ಷಡಕ್ಷರಯ್ಯ ಬದ್ನಿಮಠ ಹಾಗೂ ವೀರಣ್ಣ ಕರಿಯಲ್ಲಪ್ಪನವರ ಸಂಗೀತ ಸೇವೆ ಸಲ್ಲಿಸಲಿದ್ದಾರೆ ಎಂದು ಅನ್ನದಾನೀಶ್ವರ ಸೇವಾ ಸಮಿತಿ ಅಧ್ಯಕ್ಷ ಮುತ್ತಪ್ಪ ನೋಟಗಾರ ತಿಳಿಸಿದ್ದಾರೆ.

## ಮಾನಸಿಕ ಆರೋಗ್ಯ ಸಮಾಲೋಚಕರ ಹುದ್ದೆಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಶಾಲಾ ಶಿಕ್ಷಣ ಇಲಾಖೆಯ ಸಮಗ್ರ ಶಿಕ್ಷಣ ಕರ್ನಾಟಕ ಕಾರ್ಯಕ್ರಮದಡಿ 2026-27ನೇ ಸಾಲಿನಲ್ಲಿ ಪ್ರೌಢ ಹಾಗೂ ಪದವಿ ಪೂರ್ವ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸುವ ಉದ್ದೇಶದಿಂದ Academic Resource Person for Mental Health (Consultant) ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಪ್ರತಿ ತಾಲೂಕು ಬಿ.ಆರ್.ಸಿ. ಕಚೇರಿಗೆ ತಲಾ ಒಬ್ಬರನ್ನು ನೇಮಕ ಮಾಡಿಕೊಳ್ಳಲಾಗುತ್ತಿದ್ದು, ಆಸಕ್ತ ಹಾಗೂ ಅರ್ಹ ಅಭ್ಯರ್ಥಿಗಳು ಆಗಸ್ಟ್ 24ರೊಳಗೆ ಅರ್ಜಿ ಸಲ್ಲಿಸಬೇಕು. ಹುದ್ದೆಗೆ ಸಂಬಂಧಿಸಿದ ಹೆಚ್ಚಿನ ಮಾಹಿತಿಗಾಗಿ 9448999396 ಮೊಬೈಲ್ ಸಂಖ್ಯೆಗೆ ಸಂಪರ್ಕಿಸಬಹುದು. ಆಸಕ್ತ ಹಾಗೂ ಅರ್ಹ ಅಭ್ಯರ್ಥಿಗಳು ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸುವಂತೆ ಗದಗ ಸಮಗ್ರ ಶಿಕ್ಷಣ ಕರ್ನಾಟಕದ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಕೃಷಿ ಇಲಾಖೆಯ ಆತ್ಮ ಯೋಜನೆಯಡಿ 2026-27ನೇ ಸಾಲಿಗೆ ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ನೀಡಲಾಗುವ ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಜಿಲ್ಲೆಯ ರೈತರು ಹಾಗೂ ರೈತ ಮಹಿಳೆಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ರೈತರು ಆ. 29ರೊಳಗಾಗಿ ತಮ್ಮ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಿಂದ ಅರ್ಜಿ ಪಡೆದು, ಅಗತ್ಯ ಮಾಹಿತಿಯನ್ನು ಭರ್ತಿ ಮಾಡಿ, ಸಂಬಂಧಿಸಿದ ದಾಖಲಾತಿಗಳೊಂದಿಗೆ ಅದೇ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಗದಗ ಜಂಟಿ ಕೃಷಿ ನಿರ್ದೇಶಕರು ಹಾಗೂ ಯೋಜನಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಗತಿಪರ ರೇಷ್ಮೆ ಬೆಳೆಗಾರರಿಗೆ ಪ್ರಶಸ್ತಿ: ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ರೇಷ್ಮೆ ಇಲಾಖೆ ವತಿಯಿಂದ 2022-23 ಹಾಗೂ 2024-25ನೇ ಸಾಲಿನ ಪ್ರಗತಿಪರ ರೇಷ್ಮೆ ಬೆಳೆಗಾರರು ಹಾಗೂ ರೇಷ್ಮೆ ನೂಲು ಬಿಚ್ಚಾಣಿಕೆದಾರರಿಗೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 20 ಕೊನೆಯ ದಿನವಾಗಿದೆ. ಜಿಲ್ಲೆಯಲ್ಲಿ ರೇಷ್ಮೆ ಕೃಷಿಯ ವಿವಿಧ ವಿಭಾಗಗಳಲ್ಲಿ ಅತ್ಯುತ್ತಮ ಪ್ರಗತಿ ಸಾಧಿಸಿರುವ ರೇಷ್ಮೆ ಬೆಳೆಗಾರರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗುವುದು. ಪ್ರಶಸ್ತಿಗೆ ಅರ್ಹರಾಗಲು ರೇಷ್ಮೆ ಬೆಳೆಗಾರರು ಕನಿಷ್ಠ 1 ಎಕರೆ ಹಿಪ್ಪುನೇರಳೆ ವಿಸ್ತೀರ್ಣ ಹೊಂದಿರಬೇಕು ಹಾಗೂ ಪ್ರತ್ಯೇಕ ಹುಳು ಸಾಕಾಣಿಕೆ ಮನೆ ಹೊಂದಿರಬೇಕು. 100 ಮೊಟ್ಟೆಗೆ ಸರಾಸರಿ ರೇಷ್ಮೆ ಗೂಡಿನ ಇಳುವರಿ 65 ಕೆ.ಜಿ.ಗಿಂತ ಕಡಿಮೆ ಇರಬಾರದು.

ಒಂದು ಎಕರೆಗೆ ಗೂಡಿನ ಸರಾಸರಿ ಉತ್ಪಾದನೆ 500 ಕೆ.ಜಿಗಿಂತ ಕಡಿಮೆ ಇರಬಾರದು. ಪ್ರತಿ ಎಕರೆಗೆ ಚಾಕಿ ಮಾಡಿದ ಮೊಟ್ಟೆಗಳ ಪ್ರಮಾಣ, ಸರಾಸರಿ ಇಳುವರಿ ಹಾಗೂ ಉತ್ಪಾದಿಸಿದ ರೇಷ್ಮೆ ಗೂಡಿನ ಪ್ರಮಾಣವನ್ನು ಆಧರಿಸಿ ಪ್ರಶಸ್ತಿಗೆ ಬೆಳೆಗಾರರನ್ನು ಆಯ್ಕೆ ಮಾಡಲಾಗುವುದು. ರೇಷ್ಮೆ ಗೂಡಿನ ವಹಿವಾಟಿಗೆ ಸಂಬಂಧಿಸಿದ ಮಾರುಕಟ್ಟೆ ದಾಖಲೆಗಳನ್ನು ಸಲ್ಲಿಸುವುದು ಕಡ್ಡಾಯವಾಗಿದೆ. ಪ್ರಶಸ್ತಿಗೆ ಅರ್ಹರಾಗುವ ರೇಷ್ಮೆ ಬೆಳೆಗಾರರು ನಿಗದಿತ ನಮೂನೆಯಲ್ಲಿ ಅರ್ಜಿ ಭರ್ತಿ ಮಾಡಿ, ಅಗತ್ಯ ದಾಖಲೆಗಳೊಂದಿಗೆ ಗದಗ, ಮುಂಡರಗಿ, ರೋಣ ಹಾಗೂ ಶಿರಹಟ್ಟಿ ತಾಂತ್ರಿಕ ಸೇವಾ ಕೇಂದ್ರಗಳ ಸಂಬಂಧಿಸಿದ ರೇಷ್ಮೆ ವಿಸ್ತರಣಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಗದಗ ರೇಷ್ಮೆ ಇಲಾಖೆ ಉಪನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ರೇಷ್ಮೆ ಇಲಾಖೆ ಉಪನಿರ್ದೇಶಕರು

### ಗೃಹಲಕ್ಷ್ಮೀ, ಅನ್ನಭಾಗ್ಯ, ಗೃಹಜ್ಯೋತಿ, ಶಕ್ತಿ ಯೋಜನೆಗಳ ಪ್ರಗತಿ ಪರಿಶೀಲನೆ

# ಅರ್ಹರಿಗೆ ಗ್ಯಾರಂಟಿ ಸೌಲಭ್ಯ ತಲುಪಿಸಿ

**ವಿಜಯಸಾಕ್ಷಿ ಸುದ್ದಿ, ರೋಣ**




> ಅರ್ಹ ಫಲಾನುಭವಿಗಳಿಗೆ ಯೋಜನೆಗಳ ಸೌಲಭ್ಯ ಸಕಾಲಕ್ಕೆ ತಲುಪಬೇಕು. ಅನರ್ಹರು ಹಾಗೂ ಮೃತಪಟ್ಟವರ ಹೆಸರಿನಲ್ಲಿ ಸೌಲಭ್ಯ ಮುಂದುವರಿಯದಂತೆ ಕಟ್ಟುನಿಟ್ಟಿನ ಪರಿಶೀಲನೆ ನಡೆಸಬೇಕು.
> - **ಮಿಥುನ್ ಜಿ. ಪಾಟೀಲ,** ಅಧ್ಯಕ್ಷರು, ತಾಲೂಕು ಗ್ಯಾರಂಟಿ ಸಮಿತಿ

ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಯಾವುದೇ ಅರ್ಹ ಫಲಾನುಭವಿಗಳು ಸೌಲಭ್ಯದಿಂದ ವಂಚಿತರಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಯೋಜನೆಗಳ ಲಾಭ ಪಡೆಯುತ್ತಿರುವ ಅನರ್ಹರು ಹಾಗೂ ಮೃತಪಟ್ಟ ಫಲಾನುಭವಿಗಳ ಕುರಿತು ಪರಿಶೀಲನೆ ನಡೆಸಿ, ನಿಯಮಾನುಸಾರ ಕ್ರಮ ವಹಿಸಬೇಕು ಎಂದು ರೋಣ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ್ ಜಿ. ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ರೋಣ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗೃಹಲಕ್ಷ್ಮೀ ಯೋಜನೆಯಡಿ ತಾಲೂಕಿನಲ್ಲಿ 38,422 ಪಡಿತರ ಚೀಟಿಗಳಿದ್ದು, 38,278 ಅರ್ಜಿಗಳು ನೋಂದಣಿಯಾಗಿವೆ. ಈ ಪೈಕಿ 34,528 ಅರ್ಜಿಗಳಿಗೆ ಮಂಜೂರಾತಿ ದೊರೆತಿದ್ದು, ಶೇ.90.20ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಮನೆಮನೆ ಪರಿಶೀಲನೆಯಲ್ಲಿ 945 ಫಲಾನುಭವಿಗಳು ಮೃತಪಟ್ಟಿರುವುದು ಹಾಗೂ 248 ಮಂದಿ ಜಿಎಸ್‌ಟಿಗೆ ನೋಂದಣಿಯಾಗಿರುವುದು ಪತ್ತೆಯಾಗಿದೆ. ಮನೆಯ ಯಜಮಾನಿ ಮೃತಪಟ್ಟಿದ್ದರೆ ರೇಷನ್ ಕಾರ್ಡ್‌ನಲ್ಲಿ ಅಗತ್ಯ ತಿದ್ದುಪಡಿ ಮಾಡಲು ಕ್ರಮ ಕೈಗೊಳ್ಳುವಂತೆ ಆಹಾರ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಯಿತು.

ಗೃಹಲಕ್ಷ್ಮೀ ಕಂತು ಜಮೆಯಾಗುವ ಮುನ್ನವೇ ಸಾರ್ವಜನಿಕರಿಗೆ ಸಾಮಾಜಿಕ ಜಾಲತಾಣಗಳ ಮೂಲಕ ಮಾಹಿತಿ ನೀಡಬೇಕು. ಅರ್ಹರು ಯೋಜನೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕು ಎಂದು ಅಧ್ಯಕ್ಷರು ಸೂಚಿಸಿದರು.

ಅನ್ನಭಾಗ್ಯ ಯೋಜನೆಯಡಿ ನ್ಯಾಯಬೆಲೆ ಅಂಗಡಿಗಳಲ್ಲಿ 12 ನಿಯಮಗಳ ಬ್ಯಾನರ್ ಅಳವಡಿಸುವಂತೆ ಹಿಂದಿನ ಸಭೆಯಲ್ಲಿ ಸೂಚಿಸಿದ್ದರೂ ಅನುಷ್ಠಾನವಾಗದಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಲಾಯಿತು. 75 ವರ್ಷ ಮೇಲ್ಪಟ್ಟವರಿಗೆ ಹೆಬ್ಬೆಟ್ಟು ಗುರುತಿನ ತಾಂತ್ರಿಕ ಸಮಸ್ಯೆ ಎದುರಾದಲ್ಲಿ ಒಟಿಪಿ ಮೂಲಕ ಪಡಿತರ ಪಡೆಯುವ ಅವಕಾಶದ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡುವಂತೆ ಸೂಚಿಸಲಾಯಿತು.

ಪ್ರತಿ ತಿಂಗಳು 25ರ ನಂತರ ಪಡಿತರ ವಿತರಣೆ ಆರಂಭವಾಗುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ಸಮಿತಿ ಸದಸ್ಯ ಬಿ.ಎಸ್. ರಡ್ಡೇರ ಗಮನ ಸೆಳೆದರು. ಗೋದಾಮಿನಿಂದ ಪಡಿತರ ಎತ್ತುವಳಿ ವಿಳಂಬವಾಗುತ್ತಿರುವುದರಿಂದ ಸಮಸ್ಯೆಯಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದರು.

ಗೃಹಜ್ಯೋತಿ ಯೋಜನೆಯಡಿ ಹೆಸ್ಕಾಂ ವ್ಯಾಪ್ತಿಯಲ್ಲಿ ಫಲಾನುಭವಿಗಳ ಮರುಸಮೀಕ್ಷೆ ಶೇ.86ರಷ್ಟು ಪೂರ್ಣಗೊಂಡಿದೆ. ಉಳಿದವರ ಸಮೀಕ್ಷೆಯನ್ನು ಮನೆಮನೆಗೆ ತೆರಳಿ ಶೀಘ್ರ ಪೂರ್ಣಗೊಳಿಸುವಂತೆ ಸೂಚಿಸಲಾಯಿತು. ಯೋಜನೆಯಿಂದ ಹೆಸರು ಹೊರಗುಳಿಯದಂತೆ ಅಗತ್ಯ ದಾಖಲೆಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡುವಂತೆ ತಿಳಿಸಲಾಯಿತು.

ವಿದ್ಯುತ್ ಸಲಹಾ ಸಮಿತಿ ಸಭೆಗಳ ಮಾಹಿತಿ ಸದಸ್ಯರಿಗೆ ದೊರೆಯುತ್ತಿಲ್ಲ ಎಂದು ಶಿವಪ್ಪ ಗಾಣಿಗೇರ ಆಕ್ಷೇಪ ವ್ಯಕ್ತಪಡಿಸಿದರು. ಸಾರ್ವಜನಿಕರ ವಿದ್ಯುತ್ ಸಮಸ್ಯೆಗಳನ್ನು ಇಲಾಖೆಯ ಗಮನಕ್ಕೆ ತರಲು ಸಭೆಗಳನ್ನು ನಿಯಮಿತವಾಗಿ ನಡೆಸಬೇಕು ಎಂದು ಒತ್ತಾಯಿಸಿದರು. ಶಕ್ತಿ ಯೋಜನೆಯಡಿ ರೋಣ-ಅಬ್ಬಿಗೇರಿ ಮಾರ್ಗದಲ್ಲಿ ಬೆಳಗ್ಗೆ 6 ಹಾಗೂ ಸಂಜೆ 5.30ಕ್ಕೆ ಬಸ್ ವ್ಯವಸ್ಥೆ ಕಲ್ಪಿಸುವಂತೆ ಸೂಚಿಸಲಾಯಿತು. ರೋಣ-ಸವಡಿ ಮಾರ್ಗವಾಗಿ ಗದಗಕ್ಕೆ ತೆರಳುವ ಬಸ್‌ಗಳಲ್ಲಿ ಹೆಚ್ಚಿನ ಜನದಟ್ಟಣೆ ಇರುವುದರಿಂದ ಹೆಚ್ಚುವರಿ ಬಸ್ ಕಲ್ಪಿಸುವಂತೆ ಬಸವರಾಜ ತಳವಾರ ಮನವಿ ಮಾಡಿದರು.

ರೋಣ-ಹೊಸಳ್ಳಿ-ಇಟಗಿ ಮಾರ್ಗದಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿರುವುದರಿಂದ ಶಾಲಾ ಸಮಯದಲ್ಲಿ ನಿಗದಿತ ಸ್ಥಳಗಳಲ್ಲಿ ಬಸ್ ನಿಲ್ಲಿಸುವಂತೆ ಬಿ.ಎಸ್. ರಡ್ಡೇರ ಮನವಿ ಮಾಡಿದರು. ಮಹಿಳಾ ಪ್ರಯಾಣಿಕರಿದ್ದರೂ ಕೆಲವೆಡೆ ಬಸ್ ನಿಲ್ಲಿಸದಿರುವ ಕುರಿತು ನಾಜಬೇಗಂ ಯಲಿಗಾರ ಅಸಮಾಧಾನ ವ್ಯಕ್ತಪಡಿಸಿದರು. ಈ ಹಿನ್ನೆಲೆಯಲ್ಲಿ ಚಾಲಕರು ಹಾಗೂ ನಿರ್ವಾಹಕರ ಸಭೆ ನಡೆಸಿ ಸೂಕ್ತ ತಿಳುವಳಿಕೆ ನೀಡುವಂತೆ ಅಧ್ಯಕ್ಷರು ಸೂಚಿಸಿದರು.

ಬಸ್ ನಿಲ್ದಾಣಗಳಲ್ಲಿ ಸ್ವಚ್ಛತೆ, ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸುವಂತೆಯೂ ಘಟಕ ನಿರ್ವಾಹಕರಿಗೆ ನಿರ್ದೇಶನ ನೀಡಲಾಯಿತು.

ಸಭೆಯಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಗ್ಯಾರಂಟಿ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

### ಕಿಂಗ್ ಆಗುವುದಕ್ಕಿಂತ ಕಿಂಗ್ ಮೇಕರ್ ಆಗುವ ಗುಣ ಬೆಳೆಸಿಕೊಳ್ಳಿ: ಕೊಟ್ಟೂರ ಶ್ರೀ

# ಯುವಕರ ಕೈಗೆ ಉದ್ಯೋಗ-ಉದ್ಯಮದ ಚಾವಿ ಕೊಡಿ



**ವಿಜಯಸಾಕ್ಷಿ ಸುದ್ದಿ, ಗದಗ**

ಯುವಕರು ಮುದುಕರಾಗುತ್ತಾರೆ, ಮುದುಕರು ಯುವಕರಾಗುವುದಿಲ್ಲ. ಹೀಗಾಗಿ ಹಿರಿಯರು ಜವಾಬ್ದಾರಿಗಳನ್ನು ತಮ್ಮಲ್ಲೇ ಇಟ್ಟುಕೊಳ್ಳದೆ, ಯುವಕರಿಗೆ ಉದ್ಯೋಗ, ಉದ್ಯಮದ ಅವಕಾಶ ನೀಡಿ ಸೂಕ್ತ ಮಾರ್ಗದರ್ಶನದೊಂದಿಗೆ ಮುನ್ನೆಲೆಗೆ ತರಬೇಕು ಎಂದು ಸೂಡಿಗದಗ ಜುಕ್ತಿ ಹಿರೇಮಠದ ಕೊಟ್ಟೂರ ಬಸವೇಶ್ವರ ಶಿವಾಚಾರ್ಯರು ಹೇಳಿದರು.

ನಗರದ ಕೆ.ಎಚ್. ಪಾಟೀಲ ಸಭಾಂಗಣದಲ್ಲಿ ಭಾನುವಾರ ನಡೆದ ಗದಗ ಉತ್ಸವ2026' ಕೈಗಾರಿಕಾ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳದ ಶ್ರೇಷ್ಠ ವರ್ತಕ ಹಾಗೂ ಶ್ರೇಷ್ಠ ಉದ್ಯಮಿ ಪ್ರಶಸ್ತಿ ಪ್ರದಾನ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಗದಗ ಮುದ್ರಣ ಕಾಶಿ'ಯಾಗಿ ಗುರುತಿಸಿಕೊಂಡಿದ್ದು, ಇದೀಗ ವಾಣಿಜ್ಯ ಮತ್ತು ಉದ್ಯಮ ಕ್ಷೇತ್ರದಲ್ಲೂ ತನ್ನದೇ ಛಾಪು ಮೂಡಿಸಿದೆ. ಸರ್ಕಾರ ಅಗತ್ಯ ಮೂಲಸೌಕರ್ಯ ಕಲ್ಪಿಸಿದರೆ ಜಿಲ್ಲೆಯಲ್ಲಿ ಆರ್ಥಿಕ ಚಟುವಟಿಕೆಗಳು ಮತ್ತಷ್ಟು ವಿಸ್ತರಿಸಲಿವೆ ಎಂದರು.

ಗದಗ ಉತ್ಸವದಲ್ಲಿ 140 ಮಳಿಗೆಗಳಿಗೆ ಉತ್ತಮ ಸ್ಪಂದನೆ ದೊರೆತಿದ್ದು, ಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿರುವುದು ಉತ್ಸವದ ಯಶಸ್ಸಿಗೆ ಸಾಕ್ಷಿಯಾಗಿದೆ. ಇಂತಹ ಉತ್ಸವಗಳು ವರ್ಷದಲ್ಲಿ ಎರಡುಮೂರು ಬಾರಿ ನಡೆಯಬೇಕು ಎಂದರು.

ಕಿಂಗ್ ಆಗುವವರು ಹಲವರಿದ್ದಾರೆ; ಆದರೆ ಕಿಂಗ್ ಮೇಕರ್ ಆಗುವವರು ವಿರಳ. ತಾವೇ ಮುನ್ನೆಲೆಗೆ ಬರಬೇಕೆಂಬ ಆಸೆಗಿಂತ ಇತರರನ್ನು ಬೆಳೆಸುವ ಗುಣವೇ ನಿಜವಾದ ನಾಯಕತ್ವ. ಎಂದು ಹೇಳಿದರು.

> ಉದ್ಯಮ ಆರಂಭಿಸುವ ಮುನ್ನ ಕಚ್ಚಾ ವಸ್ತು, ಮಾರುಕಟ್ಟೆ, ನುರಿತ ಕಾರ್ಮಿಕರು ಹಾಗೂ ಸಾರಿಗೆ ವ್ಯವಸ್ಥೆ ಕುರಿತು ಅಧ್ಯಯನ ಅಗತ್ಯ. ಕೇವಲ ಸಬ್ಸಿಡಿ ನಿರೀಕ್ಷೆಯಲ್ಲಿ ಉದ್ಯಮ ಆರಂಭಿಸಿ ವಿಫಲರಾಗಬಾರದು.
> - **ಪ್ರೊ. ಎಸ್.ವ್ಹಿ. ಸಂಕನೂರ,** ವಿಧಾನ ಪರಿಷತ್ ಸದಸ್ಯರು

ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವ್ಹಿ. ಸಂಕನೂರ ಮಾತನಾಡಿ, ಕೃಷಿ ಹಾಗೂ ಜವಳಿ ಆಧಾರಿತ ಕೈಗಾರಿಕೆಗಳಿಗೆ ಉತ್ತೇಜನ ನೀಡಿ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸಬೇಕು. ಉದ್ಯಮ ಆರಂಭಿಸುವ ಮುನ್ನ ಕಚ್ಚಾ ವಸ್ತು, ಮಾರುಕಟ್ಟೆ, ನುರಿತ ಕಾರ್ಮಿಕರು ಹಾಗೂ ಸಾರಿಗೆ ವ್ಯವಸ್ಥೆ ಕುರಿತು ಅಧ್ಯಯನ ಅಗತ್ಯ ಎಂದರು. ಕಪ್ಪತಗುಡ್ಡದ ನೈಸರ್ಗಿಕ ಸಂಪತ್ತು ರಕ್ಷಿಸುವ ನಿಟ್ಟಿನಲ್ಲಿ ಪರಿಸರ ಸ್ನೇಹಿ ಕೈಗಾರಿಕೆಗಳಿಗೆ ಆದ್ಯತೆ ನೀಡಬೇಕು. ಮೇಕ್ ಇನ್ ಇಂಡಿಯಾ', ಸ್ಟಾರ್ಟ್‌ಅಪ್ ಇಂಡಿಯಾ', ಸ್ಕಿಲ್ ಇಂಡಿಯಾ' ಹಾಗೂ ಮುದ್ರಾ' ಯೋಜನೆಗಳ ಪ್ರಯೋಜನ ಪಡೆದು ಯುವಕರು ಉದ್ಯಮಶೀಲರಾಗಬೇಕು ಎಂದರು.

ಸಮಾರಂಭದ ಅಧ್ಯಕ್ಷತೆ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ವಹಿಸಿದ್ದರು. ಮದುಸೂಧನ ಪುಣೇಕರ ಪ್ರಾಸ್ತಾವಿಕವಾಗಿ ಮಾತನಾಡಿದರು. ಚಂದ್ರು ಬಾಳಿಹಳ್ಳಿಮಠ ಹಾಗೂ ಮುರುಗೇಶ ಬಡ್ನಿ ನಿರೂಪಿಸಿದರು. ಕಾರ್ಯದರ್ಶಿ ಚನ್ನವೀರಪ್ಪ ಹುಣಶೀಕಟ್ಟಿ ವಂದಿಸಿದರು.

### ಪ್ರಶಸ್ತಿ ಪ್ರದಾನ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಾಜಿ ಅಧ್ಯಕ್ಷರಾದ ಆನಂದ ಪೋತ್ನೀಸ್ ಹಾಗೂ ಈಶಣ್ಣ ಮುನವಳ್ಳಿ ಅವರಿಗೆ ಜೀವಮಾನ ಸಾಧನೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.
ಶ್ರೇಷ್ಠ ಉದ್ಯಮಿ ಪ್ರಶಸ್ತಿಯನ್ನು ಕುಮಾರ ಘಟ್ಟದ, ವೀರಣ್ಣ ಸೊನ್ನದ ಹಾಗೂ ಶಿಗ್ಲಿಯ ವೀರಣ್ಣ ಪವಾಡದ ಅವರಿಗೆ, ಶ್ರೇಷ್ಠ ವರ್ತಕ ಪ್ರಶಸ್ತಿಯನ್ನು ಸುರೇಶಕುಮಾರ ಓಸವಾಲ, ಬಸಪ್ಪ ಶೆಟ್ಟಿಕೇರಿ, ಸಂಗಮೇಶ ಗೌರಿಮಠ ಹಾಗೂ ಗೌತಮ್‌ಚಂದ್ ಚೋಪ್ರಾ ಅವರಿಗೆ ಪ್ರದಾನ ಮಾಡಲಾಯಿತು.
ಶ್ರೇಷ್ಠ ಮಹಿಳಾ ಉದ್ಯಮಿ ಪ್ರಶಸ್ತಿಯನ್ನು ನಿರ್ಮಲಾ ಕೊಳ್ಳಿ ಅವರಿಗೆ ನೀಡಲಾಯಿತು. ವಿಜಯಕುಮಾರ ಮೇಗೂರ, ಅರಷದ್ ಖಾಜಿ ಹಾಗೂ ಸುವರ್ಣಾ ಮದರಿಮಠ ಅವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ಮಾಜಿ ಸಚಿವ ಎಸ್.ಎಸ್. ಪಾಟೀಲ, ಜಯದೇವ ಮೆಣಸಗಿ, ಪ್ರಕಾಶ ಉಗಲಾಟ, ಸಿದ್ರಾಮಪ್ಪ ಉಮಚಗಿ, ರಾಘವೇಂದ್ರ ಕಾಲವಾಡ, ಅಶೋಕ ಸಂಕಣ್ಣವರ, ಅರವಿಂದ ಕಾಮತ, ಮದುಸೂಧನ ಪುಣೇಕರ, ಮಂಜುನಾಥ ವೀರಲಿಂಗಯ್ಯನಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ರಾಯಣ್ಣನ ದೇಶಪ್ರೇಮ ಯುವ ಜನತೆಗೆ ಸದಾ ಪ್ರೇರಣೆಯಾಗಲಿ




**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬ್ರಿಟಿಷರ ದಬ್ಬಾಳಿಕೆ ಹಾಗೂ ಗುಲಾಮಗಿರಿಯ ವಿರುದ್ಧ ಕೆಚ್ಚೆದೆಯಿಂದ ಹೋರಾಡಿದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರ ದೇಶಪ್ರೇಮ, ಸಾಹಸ, ತ್ಯಾಗ ಮತ್ತು ಸ್ವಾಭಿಮಾನದ ಬದುಕು ಇಂದಿನ ಯುವಜನತೆಗೆ ಸದಾ ಪ್ರೇರಣೆಯಾಗಬೇಕು ಎಂದು ಕರ್ನಾಟಕ ಕಾನೂನು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಧ್ರುವರಾಜ್ ಹೊನ್ನಪ್ಪನವರ ಹೇಳಿದರು.

ನಗರದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ವಿವಿಧ ಸಂಘಟನೆಗಳ ವತಿಯಿಂದ ಶ್ರಾವಣ ಮಾಸದ ಅಂಗವಾಗಿ ಆಯೋಜಿಸಿದ್ದ ಶ್ರಾವಣ ಸಂಜೆ' ಕಾರ್ಯಕ್ರಮದಲ್ಲಿ ಸಂಗೊಳ್ಳಿ ರಾಯಣ್ಣ ಕುರಿತು ಉಪನ್ಯಾಸ ನೀಡಿದ ಅವರು, ರಾಯಣ್ಣ ಕೇವಲ ಯೋಧರಾಗಿರಲಿಲ್ಲ. ಸ್ವಾತಂತ್ರ್ಯ, ಸ್ವಾಭಿಮಾನ ಹಾಗೂ ನಾಡಿನ ಗೌರವಕ್ಕಾಗಿ ತಮ್ಮ ಜೀವನವನ್ನೇ ಅರ್ಪಿಸಿದ ಅಪ್ರತಿಮ ದೇಶಭಕ್ತರಾಗಿದ್ದರು ಎಂದು ಹೇಳಿದರು.

ಕಿತ್ತೂರು ರಾಣಿ ಚೆನ್ನಮ್ಮ ಅವರೊಂದಿಗೆ ಕೈಜೋಡಿಸಿ ಬ್ರಿಟಿಷರ ವಿರುದ್ಧ ಹೋರಾಡಿದ ರಾಯಣ್ಣ, ಬ್ರಿಟಿಷರ ಪ್ರಾಬಲ್ಯಕ್ಕೆ ತಲೆಬಾಗದೆ ಧೈರ್ಯದಿಂದ ಹೋರಾಟ ಮುಂದುವರಿಸಿದರು. ಜನರಲ್ಲಿ ದೇಶಪ್ರೇಮದ ಕಿಚ್ಚು ಹೊತ್ತಿಸಿ ಸ್ವಾತಂತ್ರ್ಯದ ಆಶಯವನ್ನು ಬಲಪಡಿಸಿದ ಅವರ ಹೋರಾಟ ಭಾರತೀಯ ಸ್ವಾತಂತ್ರ್ಯ ಚಳವಳಿಯ ಇತಿಹಾಸದಲ್ಲಿ ಮಹತ್ವದ ಸ್ಥಾನ ಪಡೆದಿದೆ ಎಂದರು.

ರಾಯಣ್ಣನ ಜೀವನದಲ್ಲಿ ಕಂಡುಬರುವ ದೇಶಪ್ರೇಮ, ನಾಯಕತ್ವ, ನಿಷ್ಠೆ, ಧೈರ್ಯ ಮತ್ತು ತ್ಯಾಗದ ಗುಣಗಳನ್ನು ಇಂದಿನ ಯುವಕರು ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ದೇಶದ ಇತಿಹಾಸ ಹಾಗೂ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗವನ್ನು ಅರಿತು ಜವಾಬ್ದಾರಿಯುತ ನಾಗರಿಕರಾಗಿ ರಾಷ್ಟ್ರ ನಿರ್ಮಾಣದಲ್ಲಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಶಿಕ್ಷಕ ರಮೇಶ ನವಲೆ ಮಾತನಾಡಿ, ನಾಡಿನ ಸ್ವಾತಂತ್ರ್ಯ ಮತ್ತು ಸ್ವಾಭಿಮಾನಕ್ಕಾಗಿ ಬದುಕಿದ ರಾಯಣ್ಣನಂತಹ ಮಹನೀಯರ ಆದರ್ಶಗಳು ನಮ್ಮ ಬದುಕಿಗೆ ದಾರಿದೀಪವಾಗಬೇಕು ಎಂದು ಹೇಳಿದರು. ಸಮಾರಂಭದಲ್ಲಿ ಮಾಜಿ ಸೈನಿಕರಾದ ಉಪ್ಪಾರ್ ಹಾಗೂ ಯೋಗೀಶ್ ಹಿರೇಮಠ ಅವರನ್ನು ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ರಾಘವೇಂದ್ರ ಶೆಟ್, ನಿರ್ಮಲಾ ಅರಳಿ, ರತ್ನಾ ಕರ್ಕಿ, ಮಹಾನಂದಾ ಕೊಣ್ಣೂರ್, ನಂದಿತಾ ಮಾಳವಾಡ, ಎಲ್.ಎಸ್. ಅರಳಿಹಳ್ಳಿ, ಪೂರ್ಣಾಜಿ ಕರಾಟೆ, ಸೋಮಶೇಖರ್ ಕೆರಿಮನಿ, ಗಂಗಾಧರ್ ಅರಳಿ, ಬಸವರಾಜ ಸಂಗಪ್ಪಶೆಟ್ಟರ್, ಶಂಕರ ಶಿಳ್ಳಿನ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಶಿಗ್ಲಿಯ ವೀರಣ್ಣ ಪವಾಡದ ಅವರಿಗೆ ಶ್ರೇಷ್ಠ ಉದ್ಯಮಿ ಪ್ರಶಸ್ತಿ




**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಿಗ್ಲಿಯ ಹಿರಿಯ ಸಮಾಜಸೇವಕ ಹಾಗೂ ಉದ್ಯಮಿ ವೀರಣ್ಣ ಹಾಲಪ್ಪ ಪವಾಡದ ಅವರಿಗೆ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ವತಿಯಿಂದ ಶ್ರೇಷ್ಠ ಉದ್ಯಮಿ ಪ್ರಶಸ್ತಿ' ನೀಡಿ ಗೌರವಿಸಲಾಯಿತು.

ಗದಗ ಎಪಿಎಂಸಿ ಯಾರ್ಡ್‌ನ ಶ್ರೀ ಸ್ವಾಮಿ ವಿವೇಕಾನಂದ ಸಭಾಭವನ ಹಾಗೂ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ, ಜಿಲ್ಲಾ ಪಂಚಾಯಿತಿ, ಗದಗ ಹಾಗೂ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ಭಾನುವಾರ ನಡೆದ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ನೇಕಾರ ಕುಟುಂಬದಲ್ಲಿ ಬೆಳೆದ ವೀರಣ್ಣ ಪವಾಡದ ಅವರು ಎಳೆವಯಸ್ಸಿನಿಂದಲೇ ನೇಕಾರಿಕೆಯಲ್ಲಿ ತೊಡಗಿಸಿಕೊಂಡು ಹಲವು ವಿದ್ಯುತ್ ಮಗ್ಗಗಳನ್ನು ಸ್ಥಾಪಿಸಿ ಹತ್ತಾರು ಕಾರ್ಮಿಕರಿಗೆ ಉದ್ಯೋಗ ಕಲ್ಪಿಸಿದ್ದಾರೆ. ಶಿಗ್ಲಿ ಸೀರೆಗಳಿಗೆ ರಾಜ್ಯಾದ್ಯಂತ ಮಾರುಕಟ್ಟೆ ಕಲ್ಪಿಸುವಲ್ಲಿಯೂ ಪ್ರಮುಖ ಪಾತ್ರ ವಹಿಸಿದ್ದಾರೆ.

ಧಾರ್ಮಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಕ್ಷೇತ್ರಗಳಲ್ಲೂ ಸಕ್ರಿಯರಾಗಿರುವ ಅವರು ಪಂಚಪೀಠಗಳ ಜಗದ್ಗುರುಗಳ ಆಶೀರ್ವಾದಕ್ಕೆ ಪಾತ್ರರಾಗಿದ್ದಾರೆ. ವಿವಿಧ ಮಠಮಂದಿರಗಳ ಸೇವೆಯೊಂದಿಗೆ ಸಾಹಿತ್ಯ ಕ್ಷೇತ್ರದಲ್ಲೂ ಗುರುತಿಸಿಕೊಂಡಿರುವ ಅವರು ಸಮನ್ವಯಾಚಾರ್ಯ' ಹಾಗೂ ತಂದೆ ಹಾಲಪ್ಪನವರ ಕುರಿತು ಕಾಯಕ ಜೀವಿ' ಕೃತಿಗಳನ್ನು ಪ್ರಕಟಿಸಿದ್ದಾರೆ.

ಅವರ ಸೇವೆಯನ್ನು ಗುರುತಿಸಿ ಈ ಹಿಂದೆ ಸದ್ಧರ್ಮ ಶ್ರೀ' ಹಾಗೂ ಶ್ರೀ ರಂಭಾಪುರಿ ಜಗದ್ಗುರು ಡಾ. ವೀರಸೋಮೇಶ್ವರ ಅವರ ಕಾರುಣ್ಯಸಿರಿ' ಸೇರಿದಂತೆ ಹಲವು ಪ್ರಶಸ್ತಿಗಳಿಂದ ಗೌರವಿಸಲಾಗಿದೆ. ಇದೀಗ ಶ್ರೇಷ್ಠ ಉದ್ಯಮಿ' ಪ್ರಶಸ್ತಿ ಲಭಿಸಿರುವುದು ಅವರ ಕಾಯಕ ಹಾಗೂ ಸಮಾಜಸೇವೆಗೆ ಮತ್ತೊಂದು ಗೌರವವಾಗಿದೆ.

ಸೂಡಿ ಜುಕ್ತಿ ಹಿರೇಮಠದ ಶ್ರೀ ಡಾ. ಕೊಟ್ಟೂರ ಬಸವೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ನಡೆದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ವಹಿಸಿದ್ದರು. ಸಂಸ್ಥೆಯ ಪದಾಧಿಕಾರಿಗಳು, ಉದ್ಯಮಿಗಳು ಹಾಗೂ ಪ್ರಶಸ್ತಿ ಪುರಸ್ಕೃತರು ಉಪಸ್ಥಿತರಿದ್ದರು.

### ವ್ಯಾಪಾರಸ್ಥರು ಅಧಿಕಾರಿಗಳ ನೋಟಿಸ್‌ಗೆ ಹೆದರಬೇಡಿ; ಕಾನೂನುಬದ್ಧವಾಗಿ ಉತ್ತರಿಸಿ: ಗುಡಿಮನಿ

# ಸಬ್ಸಿಡಿಗಿಂತ ಸ್ವಾವಲಂಬಿ ಪರಿಶ್ರಮದ ದುಡಿಮೆ ಮುಖ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಾಮಾಣಿಕತೆ, ಸ್ವಾವಲಂಬನೆ ಹಾಗೂ ನಿರಂತರ ಪರಿಶ್ರಮವೇ ಉದ್ಯಮದ ಯಶಸ್ಸಿನ ಮೂಲಮಂತ್ರ. ವ್ಯಾಪಾರಸ್ಥರು ಯಾವುದೇ ಸಮಸ್ಯೆ ಎದುರಾದರೂ ಧೈರ್ಯದಿಂದ ಹೋರಾಡಬೇಕು. ಅವರ ಬೆನ್ನಿಗೆ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಸದಾ ನಿಲ್ಲಲಿದೆ ಎಂದು ಸಂಸ್ಥೆ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಹೇಳಿದರು.

ನಗರದ ಕೆ.ಎಚ್. ಪಾಟೀಲ ಸಭಾಂಗಣದಲ್ಲಿ ಭಾನುವಾರ ನಡೆದ ಗದಗ ಉತ್ಸವ2026' ಕೈಗಾರಿಕಾ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳದ ಶ್ರೇಷ್ಠ ವರ್ತಕ ಹಾಗೂ ಶ್ರೇಷ್ಠ ಉದ್ಯಮಿ ಪ್ರಶಸ್ತಿ ಪ್ರದಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಉದ್ಯಮಿಗಳಿಗೆ ಸರ್ಕಾರದ ಆರ್ಥಿಕ ನೆರವು ಮತ್ತಷ್ಟು ಹೆಚ್ಚಾಗಬೇಕು. ಪ್ರಸ್ತುತ ನೀಡುತ್ತಿರುವ ಸಬ್ಸಿಡಿ ಮೊತ್ತವನ್ನು ಹೆಚ್ಚಿಸುವುದರ ಜತೆಗೆ, ರೈತರಿಗೆ ನೀಡುವ ಮಾದರಿಯಲ್ಲಿ ಉದ್ಯಮಿಗಳಿಗೂ ಹೆಚ್ಚಿನ ಆರ್ಥಿಕ ನೆರವು ಕಲ್ಪಿಸಬೇಕು.

ಸಿಂಗಲ್ ವಿಂಡೋ ವ್ಯವಸ್ಥೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ರೂಪಿಸಿ ಉದ್ಯಮಿಗಳಿಗೆ ಅನುಕೂಲ ಕಲ್ಪಿಸಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದರು.

ಸಬ್ಸಿಡಿಗಾಗಿ ಕಾಯುವುದಕ್ಕಿಂತ ಸ್ವಾವಲಂಬಿಯಾಗಿ ದುಡಿಯುವುದು ಮುಖ್ಯ. ಪ್ರಾಮಾಣಿಕವಾಗಿ ದುಡಿಯುವವರನ್ನು ಸಂಸ್ಥೆ ಸದಾ ಬೆಂಬಲಿಸುತ್ತದೆ. ಎಂದು ಗುಡಿಮನಿ ಹೇಳಿದರು.

ಸರ್ಕಾರ ತೆರಿಗೆ ಸಂಗ್ರಹಿಸುವ ತನ್ನ ಕರ್ತವ್ಯ ನಿರ್ವಹಿಸಲಿ. ಆದರೆ ಸಣ್ಣಪುಟ್ಟ ಕಾರಣಗಳಿಗೆ ಉದ್ಯಮಿಗಳಿಗೆ ಅನಗತ್ಯ ತೊಂದರೆ ನೀಡಬಾರದು. ಒಂದು ಉದ್ಯಮಕ್ಕೆ ಧಕ್ಕೆಯಾದರೆ ಅದರೊಂದಿಗೆ ನೂರಾರು ಕುಟುಂಬಗಳ ಬದುಕು ಸಂಕಷ್ಟಕ್ಕೆ ಸಿಲುಕುತ್ತದೆ ಎಂದು ಎಚ್ಚರಿಸಿದರು.

ಆರ್ಥಿಕ ಸಂಕಷ್ಟ ಹಾಗೂ ಸಾಲದ ಒತ್ತಡದ ನಡುವೆಯೂ ಛಲ ಬಿಡದೆ ಪ್ರಾಮಾಣಿಕವಾಗಿ ದುಡಿದು ಯಶಸ್ಸು ಸಾಧಿಸಿರುವ ಗಜೇಂದ್ರಗಡದ ಉದ್ಯಮಿಗಳ ಸಾಧನೆ ಇತರರಿಗೆ ಮಾದರಿಯಾಗಿದೆ. ನಿರಂತರ ಪರಿಶ್ರಮದಿಂದ ಸಂಕಷ್ಟದ ದಿನಗಳನ್ನು ಮೀರಿ ಯಶಸ್ಸು ಗಳಿಸಬಹುದು ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಅಧಿಕಾರಿಗಳ ನೋಟಿಸ್‌ಗೆ ಹೆದರಿ ಉದ್ಯಮಿಗಳು ಆತಂಕಕ್ಕೊಳಗಾಗಬಾರದು. ಕಾನೂನುಬದ್ಧವಾಗಿ



ಉತ್ತರಿಸುವ ಧೈರ್ಯ ಬೆಳೆಸಿಕೊಳ್ಳಬೇಕು. ವ್ಯಾಪಾರಸ್ಥರ ಸಮಸ್ಯೆಗಳಿಗೆ ಮಾರ್ಗದರ್ಶನ ನೀಡಲು ಸಂಸ್ಥೆಯಲ್ಲಿ ಅನುಭವಿ ವಕೀಲರು ಹಾಗೂ ವಿಷಯ ತಜ್ಞರು ಲಭ್ಯವಿದ್ದು, ಯಾವುದೇ ತೊಂದರೆ ಎದುರಾದರೂ ಸಂಸ್ಥೆಯನ್ನು ಸಂಪರ್ಕಿಸಬೇಕು ಎಂದು ಸಲಹೆ ನೀಡಿದರು.

ಗದಗ ಉತ್ಸವದ ಅಂಗವಾಗಿ ನಡೆದ 140 ಮಳಿಗೆಗಳ ಪ್ರದರ್ಶನ ಯಶಸ್ವಿಯಾಗಿದ್ದು, ಸಣ್ಣ ಗುಡಿ ಕೈಗಾರಿಕೆಗಳಿಂದ ಉತ್ಪನ್ನ ತಯಾರಿಸಿ ರಫ್ತು ಮಾಡುವ ಮಟ್ಟಕ್ಕೆ ಬೆಳೆದಿರುವ ಉದ್ಯಮಿಗಳ ಸಾಧನೆ ಹೆಮ್ಮೆಯ ಸಂಗತಿ ಎಂದರು.

> ಅಧಿಕಾರಿಗಳ ನೋಟಿಸ್‌ಗೆ ಹೆದರಿ ಉದ್ಯಮಿಗಳು ಆತಂಕಕ್ಕೊಳಗಾಗಬಾರದು. ಕಾನೂನುಬದ್ಧವಾಗಿ ಉತ್ತರಿಸುವ ಧೈರ್ಯ ಬೆಳೆಸಿಕೊಳ್ಳಬೇಕು. ವ್ಯಾಪಾರಸ್ಥರ ಯಾವುದೇ ಸಮಸ್ಯೆಗೆ ಸಂಸ್ಥೆ ಅವರ ಬೆನ್ನಿಗೆ ನಿಲ್ಲಲಿದೆ.
> - **ಶರಣಬಸಪ್ಪ ಗುಡಿಮನಿ,** ಅಧ್ಯಕ್ಷರು, ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ

ಉತ್ಸವದ ಆಯೋಜನೆಗೆ ಸರ್ಕಾರದ ನೆರವು ಮಾತ್ರ ಸಾಕಾಗುವುದಿಲ್ಲ. ಸುಮಾರು ₹50 ಲಕ್ಷ ವೆಚ್ಚವನ್ನು ವ್ಯಾಪಾರಸ್ಥರು ತಮ್ಮ ಲಾಭದ ಹಣದಿಂದಲೇ ಭರಿಸುತ್ತಿದ್ದಾರೆ. ಉದ್ಯಮಿಗಳು ತಮ್ಮ ಕಾರ್ಮಿಕರ ಕುಟುಂಬಗಳ ಮದುವೆ, ವೈದ್ಯಕೀಯ ಸೇರಿದಂತೆ ಅಗತ್ಯ ಸಂದರ್ಭಗಳಲ್ಲಿ ನೆರವಾಗುವ ಮೂಲಕ ಸಾಮಾಜಿಕ ಹೊಣೆಗಾರಿಕೆಯನ್ನೂ ನಿಭಾಯಿಸುತ್ತಿದ್ದಾರೆ ಎಂದು ಹೇಳಿದರು.

ಉತ್ಸವದ ಯಶಸ್ಸಿಗೆ ಸಹಕರಿಸಿದ ಚೇಂಬರ್ ಪದಾಧಿಕಾರಿಗಳು ಹಾಗೂ ವ್ಯಾಪಾರಸ್ಥರಿಗೆ ಗುಡಿಮನಿ ಕೃತಜ್ಞತೆ ಸಲ್ಲಿಸಿದರು.

## ಸಂಕ್ಷಿಪ್ತ ಸುದ್ದಿಗಳು

# ಅಂಧ ಅನಾಥರ ಸೇವೆ ನಿರಂತರ ಜ್ಞಾನಜ್ಯೋತಿಯಾಗಲಿ



**ವಿಜಯಸಾಕ್ಷಿ ಸುದ್ದಿ, ಗದಗ**

ಜ್ಞಾನ ಜ್ಯೋತಿ ಪಂಡಿತ ಪುಟ್ಟರಾಜ ಗವಾಯಿಗಳವರ ಸೇವಾ ಟ್ರಸ್ಟ್ ವತಿಯಿಂದ ನಗರದ ಶ್ರೀ ವೀರೇಶ್ವರ ಪುಣ್ಯಾಶ್ರಮದ ಪಂಡಿತ ಪಂಚಾಕ್ಷರ ಗವಾಯಿಗಳವರ ಕಾಲೇಜು ಆವರಣದಲ್ಲಿ ಗಾನಯೋಗಿ ಪಂಡಿತ ಪಂಚಾಕ್ಷರ ಗವಾಯಿಗಳವರ 86ನೇ ಪುಣ್ಯಸ್ಮರಣೋತ್ಸವ, ಪಂಡಿತ ಪುಟ್ಟರಾಜ ಗವಾಯಿಗಳವರ 16ನೇ ಪುಣ್ಯಸ್ಮರಣೋತ್ಸವ ಹಾಗೂ ಗುರುಪೂರ್ಣಿಮೆ ಅಂಗವಾಗಿ ಸಂಗೀತೋತ್ಸವ, ಉಪನ್ಯಾಸ ಮತ್ತು ನುಡಿನಮನ ಕಾರ್ಯಕ್ರಮ ನಡೆಯಿತು.

ಸಸಿಗೆ ನೀರುಣಿಸುವ ಮೂಲಕ ಸಂಗೀತ ಪಾಠಶಾಲೆಯ ಮುಖ್ಯೋಪಾಧ್ಯಾಯ ಮಂಜಯ್ಯ ಎಸ್. ಹಿರೇಮಠ ಕಾರ್ಯಕ್ರಮ ಉದ್ಘಾಟಿಸಿ, ಪೂಜ್ಯರ ಹೆಸರಿನಲ್ಲಿ ಇಂತಹ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಖ್ಯಾತ ಸಂಗೀತ ಕಲಾವಿದ ಪಂ. ವೆಂಕಟೇಶಕುಮಾರ ಅಲ್ಕೋಡ ಮಾತನಾಡಿ, ಜ್ಞಾನ ಜ್ಯೋತಿ ಪಂಡಿತ ಪುಟ್ಟರಾಜ ಗವಾಯಿಗಳವರ ಸೇವಾ ಟ್ರಸ್ಟ್ ನಿರಂತರ ಜ್ಞಾನಜ್ಯೋತಿಯಾಗಿ ಅಂಧಅನಾಥರ ಹಾಗೂ ನಾಡಿನ ಕಲ್ಯಾಣ ಕಾರ್ಯದಲ್ಲಿ ತೊಡಗಿರಲಿ ಎಂದು ಆಶಿಸಿದರು.

ಸಂಗೀತ ಉಪನ್ಯಾಸಕ ಅಂಬಾದಾಸ ಎಸ್. ಜಮಾದಾರ ಉಪನ್ಯಾಸ ನೀಡಿದರು. ಮುಖ್ಯೋಪಾಧ್ಯಾಯ ಪಿ.ಎಸ್. ಹಿರೇಮಠ, ತಬಲಾ ಶಿಕ್ಷಕ ರಾವುತಪ್ಪ ಹೂಗಾರ, ಶೇಖಣ್ಣ ರೋಣಿ, ಕುಮಾರಸ್ವಾಮಿ ವೆಂಕಟಾಪುರಮಠ, ಕಳಕಪ್ಪ ಕುರ್ತಕೋಟಿ, ಶಿವಚಲಕುಮಾರ ಸಾಲಿಮಠ ಹಾಗೂ ಕಳಕಪ್ಪ ಮದ್ಲಾಪೂರ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಅಂಧಅನಾಥ ಮಕ್ಕಳ ಸೇವೆಗಾಗಿ ಸಮಾಜ ಕಲ್ಯಾಣ ಇಲಾಖೆಯಿಂದ 2026ನೇ ಸಾಲಿನ ರಾಜ್ಯ ಪ್ರಶಸ್ತಿ ಪಡೆದ ಕಳಕಪ್ಪ ವೀರಪ್ಪ ಮದ್ಲಾಪೂರ ಅವರನ್ನು ಸನ್ಮಾನಿಸಲಾಯಿತು. ಪುಟ್ಟರಾಜ ವೆಂಕಟಾಪುರಮಠ, ಸಂಕೇಶ್ವರ ಮಸಣಿ, ಸೋಹಿನಿ ವಿ. ಅಲ್ಕೋಡ, ರೇಣುಕಾ ಲಕ್ಕುಡಿ, ಶ್ರೇಯಸ್ ಮಂಡ್ಯ, ಮಲ್ಲು, ಆದರ್ಶ ಜಾಧವ ಹಾಗೂ ರಾಹುಲ ಅಮ್ಮಿನಗಡ ಸಂಗೀತ ಕಾರ್ಯಕ್ರಮ ನೀಡಿದರು. ರಾಮಯ್ಯ ಸಂಬಾಳಮಠ ಪ್ರಾರ್ಥಿಸಿದರು. ಶಿವಚಲಕುಮಾರ ಸಾಲಿಮಠ ಹಾಗೂ ಕಳಕಪ್ಪ ಕುರ್ತಕೋಟಿ ನಿರೂಪಿಸಿದರು. ಕುಮಾರಸ್ವಾಮಿ ವೆಂಕಟಾಪುರಮಠ ವಂದಿಸಿದರು.

# ಗುರುವಂದನೆಯೇ ಶಿಷ್ಯತ್ವದ ಸಾರ್ಥಕತೆ: ವಿನೋದ ಅಕ್ಕಿ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗಾಂಧಿ ಸರ್ಕಲ್ ಸಮೀಪದ ಅಕ್ಕಿಸ್ ಫಿಟ್ನೆಸ್ ವರ್ಲ್ಡ್‌ನಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾ ಹಾಗೂ ವಿವಿಧೋದ್ದೇಶಗಳ ಸಂಘದ ಪ್ರಥಮ ವಾರ್ಷಿಕೋತ್ಸವದ ಅಂಗವಾಗಿ ಆ. 15ರಂದು ಗುರುವಂದನಾ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಯೋಜಿಸಲಾಯಿತು.

ಗುರುವಂದನೆ ಸ್ವೀಕರಿಸಿ ಮಾತನಾಡಿದ ವ್ಯಾಯಾಮ ಶಿಕ್ಷಕ ವಿನೋದ ಅಕ್ಕಿ, ಒಬ್ಬ ಶಿಷ್ಯನಿಗೆ ಒಳ್ಳೆಯ ಗುರು ಸಿಗುವುದು ಎಷ್ಟು ಕಷ್ಟವೋ, ಅದೇ ರೀತಿ ಒಬ್ಬ ಗುರುವಿಗೆ ಒಳ್ಳೆಯ ಶಿಷ್ಯ ಸಿಗುವುದು ಅಷ್ಟೇ ಕಷ್ಟ. ಅಂತಹದರಲ್ಲಿ ನೀವು ನನಗೆ ಶಿಷ್ಯರಾಗಿ ಸಿಕ್ಕಿರುವುದು ನನ್ನ ಭಾಗ್ಯ ಎಂದು ಸಂತಸ ವ್ಯಕ್ತಪಡಿಸಿದರು.

ಹಳೆಯ ವಿದ್ಯಾರ್ಥಿ ಪರಶುರಾಮ ಸೀತಿಮನಿ ಮಾತನಾಡಿ, ಗುರುಗಳು ಕೇವಲ ವ್ಯಾಯಾಮವನ್ನು ಕಲಿಸಿಲ್ಲ. ಆರೋಗ್ಯವೇ ಮಹಾಭಾಗ್ಯ' ಎಂಬುದನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದರ ಜೊತೆಗೆ ದೇಹವನ್ನು ಸದೃಢವಾಗಿಟ್ಟುಕೊಳ್ಳುವುದು, ಮನಸ್ಸನ್ನು ಗಟ್ಟಿಗೊಳಿಸುವುದು, ಸೋಲನ್ನು ಎದುರಿಸುವುದು ಹಾಗೂ ನಿರಂತರ ಪ್ರಯತ್ನಿಸುವ ಗುಣವನ್ನು ಕಲಿಸಿದ್ದಾರೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಗುರುಗಳೊಂದಿಗೆ ಕಳೆದ ಸ್ಮರಣೀಯ ಕ್ಷಣಗಳನ್ನು ಹಂಚಿಕೊಂಡರು. ಕಾರ್ಯಕ್ರಮದಲ್ಲಿ ಹಳೆಯ ವಿದ್ಯಾರ್ಥಿಗಳಾದ ವಾಸು ಕಲ್ಮನಿ, ರವಿರಾಜ ದೊಡ್ಡಮನಿ, ಓಬಳೇಶ ಯಶವಂತಪುರ, ಪ್ರವೀಣ ರಾಮಗಿರಿ, ನಾಗರಾಜ ಸೊನ್ನದ, ಮಂಜುನಾಥ ತಳಗೇರಿ, ವಿಜಯ ಹೊಸಮನಿ, ಪರಶುರಾಮ ಸಂಗಾಪೂರ, ದೀಪಕ, ಅರ್ಜುನ ಸೇರಿದಂತೆ ಪ್ರಸ್ತುತ ವಿದ್ಯಾರ್ಥಿಗಳು ಗುರುಗಳಿಗೆ ಗೌರವ ಸಮರ್ಪಿಸಿದರು.

ಶ್ರೀ ವಿಜಯ ಎಫ್.ಟಿ. ಮಾತನಾಡಿ, ಪ್ರಸಕ್ತ ಸಾಲಿನಲ್ಲಿ ವ್ಯಾಯಾಮ ಶಾಲೆಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಾದ ಆದಿತ್ಯ, ವೈಭವ, ಫಯಾಜ್, ಮಹೇಶ ಹಾಗೂ ಎಚ್. ಮಂಜು ಅವರಿಗೆ ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು ಎಂದರು. ಮುಖ್ಯ ಅತಿಥಿ ಎಸ್‌ಬಿಐ ಬ್ಯಾಂಕ್‌ನ ಅಮರೇಶ್ವರ ಕೆ. ಮಾತನಾಡಿ, ಗುರುವಂದನಾ ಕಾರ್ಯಕ್ರಮಕ್ಕೆ ಆಹ್ವಾನಿಸಿರುವುದು ಸಂತಸ ತಂದಿದೆ. ತಾವು ಪ್ರಸ್ತುತ ಈ ವ್ಯಾಯಾಮ ಶಾಲೆಯ ಸದಸ್ಯರಾಗಿದ್ದು, ಕೊನೆಯವರೆಗೂ ಸದಸ್ಯರಾಗಿ ಮುಂದುವರಿಯುವ ಇಚ್ಛೆ ಹೊಂದಿರುವುದಾಗಿ ತಿಳಿಸಿದರು. ಕಾರ್ಯಕ್ರಮದಲ್ಲಿ ಗುರುಗಳು, ಹಳೆಯ ವಿದ್ಯಾರ್ಥಿಗಳು ಹಾಗೂ ಪ್ರಸ್ತುತ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಗದಗ ಉತ್ಸವ: 30ಕ್ಕೂ ಹೆಚ್ಚು ದಾನಿಗಳಿಂದ ರಕ್ತದಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಎಪಿಎಂಸಿ ಯಾರ್ಡ್‌ನ ಸ್ವಾಮಿ ವಿವೇಕಾನಂದ ಸಭಾಭವನ ಹಾಗೂ ಕೆ.ಎಚ್. ಪಾಟೀಲ ಸಭಾಭವನದಲ್ಲಿ ನಡೆಯುತ್ತಿರುವ ಗದಗ ಉತ್ಸವ-2026' ಕೈಗಾರಿಕಾ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳದ ಅಂಗವಾಗಿ ಭಾನುವಾರ ರಕ್ತದಾನ ಶಿಬಿರ ಆಯೋಜಿಸಲಾಗಿತ್ತು. ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ ಹಾಗೂ ಜಿಲ್ಲಾ ಪಂಚಾಯಿತಿ ಆಶ್ರಯದಲ್ಲಿ ನಡೆಯುತ್ತಿರುವ ಉತ್ಸವದಲ್ಲಿ ಗದಗ ಐಎಂಎ ರಕ್ತಭಂಡಾರದ ಸಹಕಾರದೊಂದಿಗೆ ಆಯೋಜಿಸಿದ್ದ ಶಿಬಿರದಲ್ಲಿ 30ಕ್ಕೂ ಹೆಚ್ಚು ದಾನಿಗಳು ರಕ್ತದಾನ ಮಾಡಿದರು. ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ, ಸೋಮನಾಥ ಕೆ. ಜಾಲಿ, ಬಸವರಾಜ ಅಂಗಡಿ ಸೇರಿದಂತೆ ಸಂಸ್ಥೆಯ ಪದಾಧಿಕಾರಿಗಳು ಹಾಗೂ ವ್ಯಾಪಾರಸ್ಥರು ರಕ್ತದಾನ ಮಾಡುವ ಮೂಲಕ ಮಾನವೀಯತೆ ಮೆರೆದರು. ಈ ಸಂದರ್ಭದಲ್ಲಿ ಸಂಸ್ಥೆಯ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಶೀಕಟ್ಟಿ, ಗದಗ ಉತ್ಸವ ಸಮಿತಿ ಅಧ್ಯಕ್ಷ ಮಧುಸೂಧನ ಪುಣೇಕರ, ಉಪಾಧ್ಯಕ್ಷ ಜಯದೇವ ಮೆಣಸಗಿ, ಪ್ರಕಾಶ ಉಗಲಾಟ, ಸಿದ್ರಾಮಪ್ಪ ಉಮಚಗಿ, ಸಹ ಗೌರವ ಕಾರ್ಯದರ್ಶಿ ರಾಘವೇಂದ್ರ ಕಾಲವಾಡ, ಅಶೋಕ ಸಂಕಣ್ಣವರ, ಕೋಶಾಧ್ಯಕ್ಷ ಅರವಿಂದ ಕಾಮತ, ಕೋ-ಚೇರಮನ್ ಮಂಜುನಾಥ ವೀರಲಿಂಗಯ್ಯನಮಠ, ದಾನಯ್ಯ ಗಣಾಚಾರಿ, ವೀರಭದ್ರಯ್ಯ ಧನ್ನೂರಹಿರೇಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಿದೆ | ಪರಿಷ್ಕೃತ ವೇತನ ಜಾರಿಗೆ ಆಗ್ರಹಿಸಿ ಪ್ರತಿಭಟನೆ

# ಕನಿಷ್ಠ ವೇತನ ತಡೆಗೆ ಗ್ರಾಪಂ ನೌಕರರ ಆಕ್ರೋಶ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಪರಿಷ್ಕರಿಸಿ ಪ್ರಕಟಿಸಿದ್ದ ಕನಿಷ್ಠ ವೇತನದ ಅಧಿಸೂಚನೆಯನ್ನು ತಡೆಹಿಡಿದಿರುವ ರಾಜ್ಯ ಸರ್ಕಾರದ ಕ್ರಮಕ್ಕೆ ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಗ್ರಾಮ ಪಂಚಾಯಿತಿ ಹಾಗೂ ಸ್ವಚ್ಛವಾಹಿನಿ ನೌಕರರು, ಪರಿಷ್ಕೃತ ಕನಿಷ್ಠ ವೇತನವನ್ನು ಕೂಡಲೇ ಜಾರಿಗೊಳಿಸುವಂತೆ ಆಗ್ರಹಿಸಿ ಮಂಗಳವಾರ ಜಿಲ್ಲಾ ಪಂಚಾಯಿತಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.



ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘ (ಸಿಐಟಿಯು) ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಸಿಐಟಿಯು ರಾಜ್ಯ ಕಾರ್ಯದರ್ಶಿ ಮಹೇಶ ಪತ್ತಾರ, ಕನಿಷ್ಠ ವೇತನ ವ್ಯಾಪ್ತಿಗೆ ಬರುವ ಕೋಟ್ಯಂತರ ಕಾರ್ಮಿಕರ ವೇತನ ಪರಿಷ್ಕರಣೆ 2016ರಿಂದ ಬಾಕಿ ಉಳಿದಿತ್ತು. ಕಾರ್ಮಿಕರು ಹಾಗೂ ಸಂಘಟನೆಗಳ ನಿರಂತರ ಹೋರಾಟದ ಬಳಿಕ ಕನಿಷ್ಠ ವೇತನ ನಿಗದಿಪಡಿಸಿ ಅಧಿಸೂಚನೆ ಹೊರಡಿಸಲಾಗಿತ್ತು. ಆದರೆ ಜಾರಿಗೆ ಬರುವ ಹಂತದಲ್ಲಿ ಅದನ್ನು ತಡೆಹಿಡಿದಿರುವುದು ಕಾರ್ಮಿಕರಿಗೆ ಮಾಡಿದ ಅನ್ಯಾಯ ಎಂದು ಕಿಡಿಕಾರಿದರು.

ಸುಪ್ರೀಂಕೋರ್ಟ್ ನಿರ್ದೇಶನದಂತೆ ನ್ಯಾಯಬದ್ಧ ಕನಿಷ್ಠ ವೇತನ ನಿಗದಿಪಡಿಸುವಂತೆ ಹೈಕೋರ್ಟ್ ಸೂಚಿಸಿತ್ತು. ಇದರ ಆಧಾರದಲ್ಲಿ ರಾಜ್ಯ ಕನಿಷ್ಠ ವೇತನ ಸಲಹಾ ಸಮಿತಿ ಮೂರು ನಾಲ್ಕು ವರ್ಷಗಳ ಕಾಲ ಹಲವು ಸಭೆಗಳನ್ನು ನಡೆಸಿ, ಬೆಲೆ ಏರಿಕೆ ಸೂಚ್ಯಂಕಗಳನ್ನು ಆಧರಿಸಿ ರಾಜ್ಯವನ್ನು ಮೂರು ವಲಯಗಳಾಗಿ ವಿಂಗಡಿಸಿ ಕನಿಷ್ಠ ವೇತನ ನಿಗದಿಪಡಿಸಿತ್ತು. ಆದರೆ ಅಧಿಸೂಚನೆ ಜಾರಿ ಹಂತಕ್ಕೆ ಬಂದ ಬಳಿಕ ತಡೆಹಿಡಿದಿರುವುದು ಕಾರ್ಮಿಕರ ಹಿತಕ್ಕೆ ವಿರುದ್ಧವಾಗಿದೆ ಎಂದು ಅವರು ಹೇಳಿದರು.

ಗ್ರಾಮ ಪಂಚಾಯಿತಿ ನೌಕರರಿಗೆ ಪರಿಷ್ಕೃತ ಕನಿಷ್ಠ ವೇತನವನ್ನು ಕೂಡಲೇ ಜಾರಿಗೊಳಿಸಬೇಕು. ಮರುಪರಿಷ್ಕರಣೆಗಾಗಿ ರಚಿಸಿರುವ ಸಚಿವ ಸಂಪುಟ ಉಪಸಮಿತಿಯನ್ನು ರದ್ದುಪಡಿಸಬೇಕು. ಸೇವಾ ಹಿರಿತನಕ್ಕೆ ಅನುಗುಣವಾಗಿ ವೇತನ ಹೆಚ್ಚಳ, ವಿವಿಧ ಭತ್ಯೆಗಳ ಹೆಚ್ಚಳ, ಇಡಗಂಟು, ಆರೋಗ್ಯ ವಿಮೆ ಹಾಗೂ ಗ್ರಾಚ್ಯುಟಿ ಸೌಲಭ್ಯಗಳನ್ನು ಜಾರಿಗೊಳಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಇದರೊಂದಿಗೆ ತರಬೇತಿ ಪಡೆದಿರುವ ಎಲ್ಲ ಸ್ವಚ್ಛವಾಹಿನಿ ನೌಕರರಿಗೆ ಕೆಲಸ ಹಾಗೂ ವೇತನ ನೀಡಬೇಕು. ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ನೌಕರರಿಗೆ ಸಾಮಾಜಿಕ ಭದ್ರತೆ ಕಲ್ಪಿಸಬೇಕು. ಕನಿಷ್ಠ ವೇತನ ಜಾರಿ ವಿಳಂಬಗೊಳಿಸದೆ ಸರ್ಕಾರ ಕೂಡಲೇ ತನ್ನ ನಿರ್ಧಾರವನ್ನು ಮರುಪರಿಶೀಲಿಸಿ ಕಾರ್ಮಿಕರ ಪರವಾಗಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಪ್ರತಿಭಟನಾಕಾರರಿಂದ ಮನವಿ ಸ್ವೀಕರಿಸಿದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿವ ರ್ಹಹಣಾಧಿಕಾರಿ ಭುವನೇಶ ಪಾಟೀಲ ಮಾತನಾಡಿ, ಜಿಲ್ಲಾ ಹಂತದಲ್ಲಿ ಪರಿಹರಿಸಬಹುದಾದ ಸಮಸ್ಯೆಗಳನ್ನು ಕೂಡಲೇ ಬಗೆಹರಿಸಲು ಪ್ರಯತ್ನಿಸಲಾಗುವುದು. ಉಳಿದ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ಕಳುಹಿಸಲಾಗುವುದು ಎಂದು ಭರವಸೆ ನೀಡಿದರು.

> ಪರಿಷ್ಕೃತ ಕನಿಷ್ಠ ವೇತನ ಜಾರಿಯಾಗುವ ಹಂತದಲ್ಲಿತ್ತು. ಆದರೆ ಸರ್ಕಾರ ಅಧಿಸೂಚನೆ ತಡೆ ಹಿಡಿದಿರುವುದು ಕಾರ್ಮಿಕರ ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಿದೆ. ಒಂದು ಕೋಟಿಗೂ ಅಧಿಕ ಶ್ರಮಜೀವಿಗಳ ಬದುಕಿನ ಮೇಲೆ ಇದು ಮಹಾದ್ರೋಹವಾಗಿದೆ.
>
> **- ಮಹೇಶ ಪತ್ತಾರ,** ರಾಜ್ಯ ಕಾರ್ಯದರ್ಶಿ, ಸಿಐಟಿಯು

ಪ್ರತಿಭಟನೆಯ ನೇತೃತ್ವವನ್ನು ಸಿಐಟಿಯು ಜಿಲ್ಲಾಧ್ಯಕ್ಷ ಬಿ.ಐ. ಈಳಿಗೇರ, ಸಂಘದ ಜಿಲ್ಲಾಧ್ಯಕ್ಷ ಮಂಜುನಾಥ ಹುಜರಾತಿ, ಪ್ರಧಾನ ಕಾರ್ಯದರ್ಶಿ ಮಹೇಶ ಹುಲಗೋಡ, ವಿ.ಸಿ. ತುಪ್ಪದಗೌಡ್ರ, ನೀಲವ್ವ ಕುರುಬರ, ಎನ್.ಎಂ. ಪಾಟೀಲ, ಪದಾಧಿಕಾರಿಗಳು ವಹಿಸಿದ್ದರು.

# ಬಸವ ಪಂಚಮಿ: ಮಕ್ಕಳಿಗೆ ಹಾಲು ವಿತರಣೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಕ್ಕಳಿಗೆ ಹಾಲು ಕುಡಿಸುವುದರಿಂದ ದೈಹಿಕ ಬೆಳವಣಿಗೆ ಹಾಗೂ ಆರೋಗ್ಯ ಉತ್ತಮವಾಗಲು ಸಹಕಾರಿಯಾಗುತ್ತದೆ. ಮಕ್ಕಳ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ನಿವೃತ್ತ ಶಿಕ್ಷಕ ಎಂ.ಎಸ್. ಧಡೇಸೂರಮಠ ಹೇಳಿದರು. ರೋಣ ತಾಲೂಕು ಮಾನವ ಬಂಧುತ್ವ ವೇದಿಕೆ ಕರ್ನಾಟಕ ವತಿಯಿಂದ ಬಸವ ಪಂಚಮಿ ಅಂಗವಾಗಿ ಪಟ್ಟಣದ ಆಶ್ರಯ ಕಾಲೊನಿ ಮಕ್ಕಳಿಗೆ ಹಾಲು ವಿತರಿಸುವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮನುಷ್ಯರಲ್ಲಿ ನಂಬಿಕೆ ಇರಬೇಕು, ಆದರೆ ಮೂಢನಂಬಿಕೆ ಇರಬಾರದು. ಜಗತ್ತಿಗೆ ಬುದ್ಧ, ಬಸವಣ್ಣ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರು ತಮ್ಮದೇ ಆದ ಮಹತ್ವದ ಕೊಡುಗೆ ನೀಡಿದ್ದಾರೆ. ಅವರ ವಿಚಾರಧಾರೆ ಹಾಗೂ ಮಾರ್ಗದರ್ಶನವನ್ನು ಜೀವನದಲ್ಲಿ ಅಳವಡಿಸಿಕೊಂಡು ಕಾಲೊನಿಯ ಮಕ್ಕಳು ಉತ್ತಮ ಶಿಕ್ಷಣ ಪಡೆಯಬೇಕು ಎಂದರು. ನಾವು ಎಲ್ಲೇ ವಾಸಿಸುತ್ತಿದ್ದರೂ ಉತ್ತಮ ಕಾರ್ಯಗಳನ್ನು ಮಾಡುವ ಮೂಲಕ ಸಮಾಜದಲ್ಲಿ ಆರೋಗ್ಯಕರ ವಾತಾವರಣ ನಿರ್ಮಿಸಬಹುದು. ಎಲ್ಲರನ್ನೂ ಸಮಾನವಾಗಿ ಕಾಣುವ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ಕೆಲಸ ಮಾಡುತ್ತಿರುವ ಮಾನವ ಬಂಧುತ್ವ ವೇದಿಕೆಯ ಕಾರ್ಯ ಶ್ಲಾಘನೀಯವಾಗಿದೆ ಎಂದರು. ಸಂಜೀವಕುಮಾರ ಕುಲಕರ್ಣಿ ಮಾತನಾಡಿ, ನಾವು ಮಾಡುವ ಕಾಯಕದಲ್ಲಿ ಪ್ರಾಮಾಣಿಕತೆ ಇರಬೇಕು. ಅತಿಯಾದ ಮೂಢನಂಬಿಕೆಗೆ ಒಳಗಾಗಿ ಜೀವನವನ್ನು ಹಾಳು ಮಾಡಿಕೊಳ್ಳಬಾರದು. ನಂಬಿಕೆಯೊಂದಿಗೆ ಪರಿಶ್ರಮದಿಂದ ಕೆಲಸ ಮಾಡಬೇಕು. ಜಾತಿ, ಮತ, ಪಂಥ, ಧರ್ಮದ ಭೇದವಿಲ್ಲದೆ ಎಲ್ಲರನ್ನೂ ಒಂದೆಡೆ ಸೇರಿಸುವ ಕೆಲಸವನ್ನು ಮಾನವ ಬಂಧುತ್ವ ವೇದಿಕೆ ಮಾಡುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಗವಿಸಿದ್ದೇಶ್ವರ ಶಾಸ್ತ್ರಿಗಳು, ಯಲ್ಲಪ್ಪ ಮಣ್ಣೊಡ್ಡರ, ಅಬ್ದುಲ್ ಖಾದರ್ ಹುಡೇದ, ಹುಚ್ಚೀರಪ್ಪ ಈಟಿ ಸೇರಿದಂತೆ ಸಮಾಜದ ಹಿರಿಯರು, ತಾಯಂದಿರು ಹಾಗೂ ಮಕ್ಕಳು ಉಪಸ್ಥಿತರಿದ್ದರು.

# ಗ್ರಾಮೀಣ ಮಹಿಳೆಯರ ಸ್ವಾವಲಂಬನೆಗೆ ಸಂಜೀವಿನಿ ಆಸರೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಮೀಣ ಮಹಿಳೆಯರನ್ನು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಸ್ವಾವಲಂಬಿಗಳನ್ನಾಗಿಸಲು ಸರ್ಕಾರ ಹಲವು ಯೋಜನೆಗಳನ್ನು ಜಾರಿಗೊಳಿಸಿದ್ದು, ಮಹಿಳೆಯರು ಅವುಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷೆ ಗಿರಿಜಮ್ಮ ಹಾರೋಗೇರಿ ಹೇಳಿದರು.

ತಾಲೂಕಿನ ಹುಲಕೋಟಿಯ ಸ್ವಯಂಸಿದ್ಧಿ ಭವನದಲ್ಲಿ ಶನಿವಾರ ತಾಲೂಕು ಜೀವನೋಪಾಯ ಸೇವಾ ಕೇಂದ್ರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಹಿಳೆಯರು ತಮ್ಮ ಆರ್ಥಿಕ ಸ್ಥಿತಿ ಸುಧಾರಿಸಿಕೊಳ್ಳುವುದರ ಜತೆಗೆ ಕುಟುಂಬ ಹಾಗೂ ಸಮಾಜದ ಅಭಿವೃದ್ಧಿಯಲ್ಲೂ ಪ್ರಮುಖ ಪಾತ್ರ ವಹಿಸಬೇಕು. ಕೌಶಲ್ಯಾಭಿವೃದ್ಧಿ, ಸ್ವಯಂ ಉದ್ಯೋಗ, ಉಳಿತಾಯ, ಸಾಲ ಸೌಲಭ್ಯ ಹಾಗೂ ಸಾಮಾಜಿಕ ಭದ್ರತೆಗೆ ಸರ್ಕಾರದ ಯೋಜನೆಗಳು ನೆರವಾಗುತ್ತಿದ್ದು, ಇವು ಮಹಿಳೆಯರು ಸಮಾಜದ ಮುಖ್ಯವಾಹಿನಿಗೆ ಬರಲು ಸಹಕಾರಿಯಾಗಿವೆ ಎಂದರು.

ತಾಲೂಕು ಪಂಚಾಯಿತಿ ಸಂಜೀವಿನಿ ಯೋಜನೆಯ ವಲಯ ಮೇಲ್ವಿಚಾರಕ ಎಸ್.ಬಿ. ಸತ್ಯಣ್ಣವರ ಮಾತನಾಡಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಸಂಜೀವಿನಿರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನಾ ಸಂಸ್ಥೆ ವತಿಯಿಂದ ಜೀವನೋಪಾಯ ಸೇವಾ ಕೇಂದ್ರ ಆರಂಭಿಸಲಾಗಿದೆ. ಗ್ರಾಮೀಣ ಮಹಿಳೆಯರಿಗೆ ಕೌಶಲ್ಯಾಭಿವೃದ್ಧಿ, ಸ್ವಯಂ ಉದ್ಯೋಗ, ಉದ್ಯಮಶೀಲತೆ ಹಾಗೂ ವಿವಿಧ ಜೀವನೋಪಾಯ ಚಟುವಟಿಕೆಗಳಿಗೆ ಅಗತ್ಯ ಸಲಹೆ ಮತ್ತು ಅವಕಾಶಗಳನ್ನು ಕೇಂದ್ರದ ಮೂಲಕ ಒದಗಿಸಲಾಗುವುದು ಎಂದರು.

ಸಂಜೀವಿನಿ ಯೋಜನೆ ಈಗಾಗಲೇ ಮಹಿಳೆಯರನ್ನು ಸಾಮಾಜಿಕ ಹಾಗೂ ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿಸುವಲ್ಲಿ ಮಹತ್ವದ ಪಾತ್ರ ವಹಿಸಿದೆ. ಜೀವನೋಪಾಯ ಸೇವಾ ಕೇಂದ್ರದ ಸದುಪಯೋಗ ಪಡೆದು ಮಹಿಳೆಯರು ಮತ್ತಷ್ಟು ಆರ್ಥಿಕವಾಗಿ ಸದೃಢರಾಗಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಹೈನುಗಾರಿಕೆಗೆ ಉತ್ತೇಜನ ನೀಡುವ ಉದ್ದೇಶದಿಂದ ಮಹಿಳೆಯರಿಗೆ ಕಡಿಮೆ ಬಡ್ಡಿದರದಲ್ಲಿ ಸಾಲ ಸೌಲಭ್ಯದ ಚೆಕ್‌ಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿ.ಪಂ. ಯುವ ವೃತ್ತಿಪರರಾದ ಸಹನಾ ಕೋಟೆಕಲ್ಲ, ಒಕ್ಕೂಟದ ಪದಾಧಿಕಾರಿಗಳಾದ ಸುಬದ್ರಾ ಪದಡಣ್ಣೆವರ, ಹೇಮಾ ರೊಳ್ಳಿ, ಅನ್ನಪೂರ್ಣ ಬಂಡಿವಡ್ಡರ, ಜಯಶ್ರೀ ಕುಂಬಾರ, ಲಕ್ಷ್ಮೀ ಬಟ್ಟೂರು, ಸಾವಿತ್ರಿ ಹೆರಕಲ್ಲ, ಅಕ್ಕಮ್ಮ ಬಿನ್ನಾಳ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

### ಕೂಲಿಕಾರ್ಮಿಕರಿಗೆ ವ್ಹಿಬಿಜಿರಾಮ್‌ಜಿ ಯೋಜನೆ ಮಾಹಿತಿ | ಸ್ಥಳದಲ್ಲೇ ಹೊಸ ಜಾಬ್ ಕಾರ್ಡ್ ವಿತರಿಸಿದ ಇಒ

# ಮನೆ ಬಾಗಿಲಿಗೇ ಜಾಬ್ ಕಾರ್ಡ್



**ವಿಜಯಸಾಕ್ಷಿ ಸುದ್ದಿ, ನರಗುಂದ**

ತಾಲೂಕಿನ ಕೊಣ್ಣೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜಾಬ್ ಕಾರ್ಡ್ ಮೇಳದ ಅಂಗವಾಗಿ ಕೂಲಿಕಾರ್ಮಿಕರ ಮನೆಮನೆಗೆ ತೆರಳಿ ಜಾಗೃತಿ ಹಾಗೂ ನೋಂದಣಿ ಅಭಿಯಾನ ನಡೆಸಲಾಯಿತು.

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಚಿನಗುಂಡಿ ನೇತೃತ್ವದಲ್ಲಿ ವಿವಿಧ ಮನೆಗಳಿಗೆ ಭೇಟಿ ನೀಡಿ, ವ್ಹಿಬಿಜಿರಾಮ್ ಜಿ ಯೋಜನೆಯಡಿ ದೊರೆಯುವ ಉದ್ಯೋಗಾವಕಾಶ ಹಾಗೂ ಸೌಲಭ್ಯಗಳ ಕುರಿತು ಕೂಲಿಕಾರ್ಮಿಕರಿಗೆ ಮಾಹಿತಿ ನೀಡಲಾಯಿತು. ಜಾಬ್ ಕಾರ್ಡ್ ಹೊಂದಿರದ ಕುಟುಂಬ ಗಳನ್ನು ಗುರುತಿಸಿ, ಮನೆಮನೆ ಭೇಟಿಯ ಸಂದರ್ಭದಲ್ಲೇ ಅರ್ಹ ಫಲಾನುಭವಿಗಳಿಗೆ ಶ್ರೀಧರ್ ಚಿನಗುಂಡಿ ಹೊಸ ಜಾಬ್ ಕಾರ್ಡ್ ವಿತರಿಸಿದರು.

ಉದ್ಯೋಗದ ಅಗತ್ಯವಿರುವವರು ಅರ್ಜಿ ಸಲ್ಲಿಸಿದರೆ ಯೋಜನೆಯಡಿ ಕೆಲಸ ಒದಗಿಸಲಾಗುವುದು ಎಂದು ತಿಳಿಸಿದರು.

ಜಾಬ್ ಕಾರ್ಡ್ ಹೊಂದಿರುವ ಪ್ರತಿಯೊಬ್ಬ ಅರ್ಹ ಕೂಲಿಕಾರ್ಮಿಕನಿಗೂ ಯೋಜನೆಯಡಿ ಉದ್ಯೋಗದ ಅವಕಾಶ ದೊರೆಯಲಿದೆ. ಜಾಬ್ ಕಾರ್ಡ್ ಮೇಳದ ಸದುಪಯೋಗ ಪಡೆದು ಅಗತ್ಯವಿರುವವರು ನೋಂದಾಯಿಸಿಕೊಳ್ಳಬೇಕು ಎಂದು ಶ್ರೀಧರ್ ಚಿನಗುಂಡಿ ಮನವಿ ಮಾಡಿದರು.

ವ್ಹಿಬಿಜಿರಾಮ್ ಜಿ ಯೋಜನೆಯ ಕ್ರಿಯಾಯೋಜನೆಯಲ್ಲಿ ವೈಯಕ್ತಿಕ ಫಲಾನುಭವಿಗಳಾಗಿ ಆಯ್ಕೆಯಾಗಿರುವವರು ತಕ್ಷಣ ಕಾಮಗಾರಿ ಆದೇಶ ಪಡೆದು ಕಾಮಗಾರಿ ಆರಂಭಿಸುವಂತೆ ಇಒ ಸೂಚಿಸಿದರು.

ಕೂಲಿಕಾರ್ಮಿಕರೊಂದಿಗೆ ಸಂವಾದ ನಡೆಸಿದ ಅವರು, ಯೋಜನೆಯಡಿ ಕೈಗೊಳ್ಳಲಾಗುವ ವಿವಿಧ ಕಾಮಗಾರಿಗಳು, ಉದ್ಯೋಗಾವಕಾಶ ಹಾಗೂ ಸೌಲಭ್ಯಗಳ ಕುರಿತು ವಿವರಿಸಿ ದರು. ಆ.15ರಿಂದ ಸೆ.15ರವರೆಗೆ ತಾಲೂಕಿನಾದ್ಯಂತ ಜಾಬ್ ಕಾರ್ಡ್ ಮೇಳ ನಡೆಯುತ್ತಿದ್ದು, ಕೂಲಿಕಾರ್ಮಿಕರು ಸಕ್ರಿಯವಾಗಿ ಪಾಲ್ಗೊಂಡು ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು. ಮನೆಮನೆ ಭೇಟಿ ಸಂದರ್ಭದಲ್ಲಿ ಕೊಣ್ಣೂರು ಗ್ರಾಮ ಪಂಚಾಯಿತಿ ಪಿಡಿಒ ಮಂಜುನಾಥ ಗಣಿ, ಐಇಸಿ ಸುರೇಶ್ ಬಾಳಿಕಾಯಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಲಿಂಗನಗೌಡರ, ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ವ್ಹಿಬಿಜಿರಾಮ್‌ಜಿ ಯೋಜನೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಆಮ್ ಆದ್ಮಿ ಪಕ್ಷದಿಂದ ಸಂಭ್ರಮದ ಸ್ವಾತಂತ್ರ್ಯೋತ್ಸವ



**ವಿಜಯಸಾಕ್ಷಿ ಸುದ್ದಿ, ಗದಗ**

ಆಮ್ ಆದ್ಮಿ ಪಕ್ಷದ ವತಿಯಿಂದ ನಗರದ ರಾಜೀವ್‌ಗಾಂಧಿ ನಗರದಲ್ಲಿ 80ನೇ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು. ಪಕ್ಷದ ಹಿರಿಯ ಮುಖಂಡ ಹಾಗೂ ನಿವೃತ್ತ ಪ್ರಿನ್ಸಿಪಾಲ್ ಮುನಾಫ್ ಹರ್ಲಾಪುರ ಅವರು ಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ ಪಕ್ಷದ ಜಿಲ್ಲಾ ಅಧ್ಯಕ್ಷ ಡಾ. ದಾದಾಪೀರ್ ಕಲೆಗಾರ ಮಾತನಾಡಿ, ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಮತ್ತು ಬಲಿದಾನವನ್ನು ಸ್ಮರಿಸಿ, ದೇಶದ ಏಕತೆ, ಸಮಾನತೆ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಉಳಿಸುವ ಜವಾಬ್ದಾರಿ ಪ್ರತಿಯೊಬ್ಬ ನಾಗರಿಕರ ಮೇಲಿದೆ ಎಂದರು. ಕಾರ್ಯಕ್ರಮದಲ್ಲಿ ರಾಜೇಂದ್ರ ಕುಮಾರ್ ಹಿರೇಮಠ, ಅಲ್ಲಫಲ್ಲಾಹ ಮಸ್ಜಿದ್ ಚೇರ್ಮನ್ ಇಸ್ಮಾಯಿಲ್ ಗುಳಗುಂದಿ, ಅಹಿಂದ ಸಂಘಟನೆ ಜಿಲ್ಲಾ ಅಧ್ಯಕ್ಷ ಇಮಾಮಸಾಬ ಕಲೆಗಾರ, ಹನಮಂತಸಾ ಪವಾರ, ಜಾಕಿರ್ ನಾಗನೂರ, ನ್ಯಾಯವಾದಿ ಎ.ಎಂ. ನದಾಫ್, ಸಂತೋಷ ಕಣವಿ, ಬಸವರಾಜ ಬಾದಾಮಿ, ರಾಜು ಕೋಪರ್ಡೆ, ಮಂಜುನಾಥ ಬಳ್ಳಾರಿ, ಕಿಶೋರ್ ಕುಮಾರ ಶಿಂಧೆ ಸೇರಿದಂತೆ ರಾಜೀವ್‌ಗಾಂಧಿ ನಗರದ ಆಟೋ ಚಾಲಕರ ಮಾಲಕರ ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಎತ್ತಿನ ಬಂಡಿಯಲ್ಲಿ ರಾಯಣ್ಣನ ಭಾವಚಿತ್ರ; ಸಂಭ್ರಮದ ಮೆರವಣಿಗೆ



**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣರ ಜಯಂತಿ ಅಂಗವಾಗಿ ಸಂಗೊಳ್ಳಿ ರಾಯಣ್ಣ ಅಭಿಮಾನಿ ಬಳಗದ ವತಿಯಿಂದ ಲಕ್ಕುಂಡಿಯಲ್ಲಿ ಎತ್ತಿನ ಬಂಡಿಗಳೊಂದಿಗೆ ರಾಯಣ್ಣರ ಭಾವಚಿತ್ರದ ಭವ್ಯ ಮೆರವಣಿಗೆ ಸಂಭ್ರಮದಿಂದ ನಡೆಯಿತು. ಮಾರುತಿ ನಗರದಿಂದ ಗ್ರಾಮದ ಪ್ರಮುಖ ಬೀದಿಗಳಲ್ಲಿ ನಡೆದ ಮೆರವಣಿಗೆಯಲ್ಲಿ 15ಕ್ಕೂ ಹೆಚ್ಚು ಎತ್ತಿನ ಬಂಡಿಗಳು ಪಾಲ್ಗೊಂಡಿದ್ದವು.

ಬಲೂನ್ ಹಾಗೂ ವಿವಿಧ ಬಣ್ಣಗಳ ಚಿತ್ತಾರಗಳಿಂದ ಅಲಂಕರಿಸಿದ್ದ ಎತ್ತಿನ ಬಂಡಿಗಳು ಮೆರವಣಿಗೆಯ ಪ್ರಮುಖ ಆಕರ್ಷಣೆಯಾಗಿದ್ದವು. ಮೆರವಣಿಗೆಯುದ್ದಕ್ಕೂ ಬಂಡಾರ ಚೆಲ್ಲಿ ಸಂಭ್ರಮಿಸಿದ ಅಭಿಮಾನಿಗಳು, ಸಂಗೊಳ್ಳಿ ರಾಯಣ್ಣರ ಶೌರ್ಯ ಹಾಗೂ ದೇಶಭಕ್ತಿಯನ್ನು ಸ್ಮರಿಸುವ ಘೋಷಣೆಗಳನ್ನು ಮೊಳಗಿಸಿದರು. ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಎಂ.ಎನ್. ಉಮಚಗಿ ಹಾಗೂ ಯುವ ಧುರೀಣ ಪ್ರಕಾಶ ಕರಿ ಅವರು ರಾಯಣ್ಣರ ಮೂರ್ತಿಗೆ ಪೂಜೆ ಸಲ್ಲಿಸಿ ಮೆರವಣಿಗೆಗೆ ಚಾಲನೆ ನೀಡಿದರು. ನಂತರ ಅನ್ನಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

### ಬಾಲ್ಯದಲ್ಲೇ ಸಂವಿಧಾನದ ಅರಿವು ಬೆಳೆಸಿಕೊಳ್ಳಿ; ಕಲ್ಲನಗೌಡ ಹೊನ್ನಪ್ಪಗೌಡ್ರ

# ಶಾಲಾ ಸಂಸತ್ತಿನಲ್ಲಿ ಪ್ರಜಾಪ್ರಭುತ್ವದ ಪಾಠ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಶಾಲೆಗಳಲ್ಲಿ ರಚಿಸುವ ಶಾಲಾ ಸಂಸತ್ತು ದೇಶದ ಸಾಂವಿಧಾನಿಕ ರಚನೆ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯ ಅರಿವು ಮೂಡಿಸುತ್ತದೆ. ವಿದ್ಯಾರ್ಥಿಗಳು ಚಿಕ್ಕ ವಯಸ್ಸಿನಲ್ಲೇ ಇದರ ಮಹತ್ವ ಅರಿತು ಸದುಪಯೋಗಪಡಿಸಿಕೊಂಡು ಭವಿಷ್ಯದಲ್ಲಿ ಉತ್ತಮ ಸಂವಿಧಾನಿಕ ಪಟುಗಳಾಗಬೇಕು ಎಂದು ಎಸ್‌ಡಿಎಂಸಿ ಅಧ್ಯಕ್ಷ ಕಲ್ಲನಗೌಡ ಹೊನ್ನಪ್ಪಗೌಡ್ರ ಹೇಳಿದರು.

ಸಮೀಪದ ತೋಟಗಂಟಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ರಚಿಸಲಾದ ಶಾಲಾ ಸಂಸತ್ತನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯ ಶಿಕ್ಷಕ ಆರ್.ಡಿ. ರಂಗಣ್ಣವರ ಮಾತನಾಡಿ, ಶಾಲಾ ಸಂಸತ್ತಿನಲ್ಲಿ ರಚಿಸಿರುವ ವಿವಿಧ ಖಾತೆಗಳು, ಅವುಗಳ ಮಹತ್ವ ಹಾಗೂ ನಿರ್ವಹಣೆ ಕುರಿತು ವಿದ್ಯಾರ್ಥಿಗಳಿಗೆ ವಿವರಿಸಿದರು.

ರಾಜ್ಯದಲ್ಲಿ ಮುಖ್ಯಮಂತ್ರಿ ಹಾಗೂ ಕೇಂದ್ರದಲ್ಲಿ ಪ್ರಧಾನಮಂತ್ರಿ ಹೇಗೆ ಆಡಳಿತ ನಡೆಸುತ್ತಾರೆ ಎಂಬುದನ್ನು ಶಾಲಾ ಸಂಸತ್ತಿನ ಮೂಲಕ ಪ್ರಾಯೋಗಿಕವಾಗಿ ಕಲಿಯಬಹುದು ಎಂದರು. ಶಿಕ್ಷಕಿ ಎಚ್.ಸಿ. ಶೈಲಾ ವಿದ್ಯಾರ್ಥಿಗಳಿಗೆ ಪ್ರಮಾಣ ವಚನ ಬೋಧಿಸಿದರು.

ಪ್ರಧಾನಮಂತ್ರಿಯಾಗಿ ಸಿಂಚನಾ ಕುರಡಗಿ, ಉಪಪ್ರಧಾನಿಯಾಗಿ ವೈಷ್ಣವಿ ಹೊನ್ನಪ್ಪಗೌಡ್ರ ಹಾಗೂ ಸಚಿವ ಸಂಪುಟದ ಸದಸ್ಯರು ಪ್ರಮಾಣ ವಚನ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಉಪಾಧ್ಯಕ್ಷೆ ಹೇಮಾ ಹಳ್ಳದಮನಿ, ವೈ.ಬಿ. ಪಾಟೀಲ ಉಪಸ್ಥಿತರಿದ್ದರು. ಶಿಕ್ಷಕಿ ಐ.ವಿ. ರಡ್ಡೇರ ಸ್ವಾಗತಿಸಿದರು. ವಿಜಯಲಕ್ಷ್ಮೀ ಕರವೀರಮಠ ವಂದಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka